ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue: 31 | ಸಂಪುಟ: 05 ಸಂಚಿಕೆ: 31 | Date: 07-02-2026 Saturday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಗೃಹ ಸಚಿವರ ತವರು ನೆಲದಲ್ಲಿ ಮಾರ್ದನಿಸಿದ ದಲಿತ ಮುಖ್ಯಮಂತ್ರಿ ಕೂಗು

ಕೊರಟಗೆರೆ: ಕರ್ನಾಟಕದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಮಧುಗಿರಿಯ ತನ್ನ ಸಂಬಂಧಿಗಳ ಖಾಸಗಿ ಕಾರ್ಯಕ್ರಮಕ್ಕೆ ತೆರಳುವ ಮಾರ್ಗ ಮಧ್ಯೆ ಕೊರಟಗೆರೆ ಪಟ್ಟಣದ ಬೈಪಾಸ್ ರಸ್ತೆಯಲ್ಲಿ ಸಚಿವರನ್ನ ಸ್ವಾಗತಿಸಿದ ಮಾದರ ಮಹಾಸಭಾ ಮತ್ತು ಮಾದಿಗ ಸಂಘಟನೆಗಳ ಮುಖಂಡರು ಮುಂದಿನ ದಲಿತ ಮುಖ್ಯಮಂತ್ರಿ ಕೆ.ಎಚ್ ಮುನಿಯಪ್ಪಜಿ ಗೆ ಜೈ... ಮುಂದಿನ ದಲಿತ ಮುಖ್ಯಮಂತ್ರಿ ಕೆ.ಎಚ್ ಮುನಿಯಪ್ಪಜಿ ಗೆ ಜೈ.. ಎಂಬ ಏರು ಧ್ವನಿಯ ಘೋಷಣೆಗಳು ಮಾರ್ದನಿಸಿದ ಘಟನೆ ನಡೆಯಿತು.





ಮಧುಗಿರಿ ತಾಲೂಕಿನ ಜಡಗೊಂಡನಹಳ್ಳಿ ಗ್ರಾಮದಲ್ಲಿ ಸಂಬಂಧಿಕರ ಖಾಸಗಿ ಕಾರ್ಯಕ್ರಮದ ನಿಮಿತ್ತ ತೆರಳುತ್ತಿದ್ದ ಸಚಿವರನ್ನ ತುಮಕೂರು ಜಿಲ್ಲೆಯ ಮಾದಿಗ ಸಮುದಾಯದ ಮುಖಂಡರು ಪಟ್ಟಣದ ರಿಂಗ್ ರಸ್ತೆಯಲ್ಲಿ ಜಮಾವಣೆಗೊಂಡು ಮುಂದಿನ ಸಿಎಂ ಮುನಿಯಪ್ಪ ಅವರು ಎಂಬ ಘೋಷ ವಾಕ್ಯ ಮೊಳಗಿದ್ದು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ..

ಇದೇ ಸಂದರ್ಭದಲ್ಲಿ ಸುವರ್ಣಗಿರಿ ಸಂಜೀವಿನಿ ತಪ್ಪೋ ಕ್ಷೇತ್ರ ಸಿದ್ದರಬೆಟ್ಟ ಪ್ರಾಂತ್ಯವನ್ನು ಆಳಿದ ಕುರಂಗರಾಜ ಅಳಿದ ನೆಲವನ್ನ ಗುರುತಿಸಿ ಸಂರಕ್ಷಿಸುವುದರ ಜೊತೆಗೆ ಕುರಂಗರಾಜನ ಪ್ರತಿಷ್ಠಾನದ ಬೆಳವಣಿಗೆಗೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಬೇಕು ಎಂಬ ಮನವಿಯನ್ನ ಕೊರಟಗೆರೆ ತಾಲೂಕು ಮಾದರ ಮಹಾಸಭಾ ಅಧ್ಯಕ್ಷ ವಿಭೂತಿ ಸಿದ್ದಪ್ಪ, ದಾಡಿ ವೆಂಕಟೇಶ್ ಅವರ ನೇತೃತ್ವದಲ್ಲಿ ಮನವಿ ಸಲ್ಲಿಕೆ ಮಾಡಲಾಯಿತು.

ತುಮಕೂರು ಜಿಲ್ಲಾ ಮಾದರಾ ಮಹಾಸಭಾ ಜಿಲ್ಲಾಧ್ಯಕ್ಷ ಹುಚ್ಚಯ್ಯ ಅವರು ಶತಶತಮಾನಗಳಿಂದ ಶೋಷಣೆ ತುಳಿತ ಕೊಳಗಾದ ಮಾದಿಗ ಸಮುದಾಯದ ಯುವಕರನ್ನ ಸಂಘಟಿಸಿ ಮುನ್ನಡೆಸಬೇಕು ಎಂದು ಸಚಿವರಲ್ಲಿ ಬೇಡಿಕೆ ಇಟ್ಟರು.



ಈ ಸಂದರ್ಭದಲ್ಲಿ ಮಾದರ ಮಹಾಸಭಾದ ಮಾಜಿ ಶಾಸಕ ಗಂಗಾ ಹನುಮಯ್ಯ, ಜಿಲ್ಲಾಧ್ಯಕ್ಷ ವೈ.ಹೆಚ್.ಹುಚ್ಚಯ್ಯ, ಉಪಾಧ್ಯಕ್ಷರಾದ ಡಾ. ಎಲ್ ಮುಕುಂದರಾಜ್, ಕೊಟ್ಟ ಶಂಕರ್ , ಗೂಳರಿವೆ ನಾಗರಾಜು, ಕೊರಟಗೆರೆ ತಾಲೂಕು ಮಾದರ ಮಹಾಸಭಾದ ವಿಭೂತಿ ಸಿದ್ದಪ್ಪ ದಾಡಿ ವೆಂಕಟೇಶ್, ದಾಸರಹಳ್ಳಿ ಶಿವರಾಮಯ್ಯ ಲಕ್ಷ್ಮೀ ನರಸಪ್ಪ, ವೀರ ಕ್ಯಾತರಾಯ, ಟೌನ್ ಮಾರುತಿ, ಗೋಪಿ, ತೋವಿನಕೆರೆಹನುಮಂತರಾಯಪ್ಪ,ಕಾಮರಾಜನಹಳ್ಳಿ ದೊಡ್ಡಯ್ಯ,ಗಂಗಣ್ಣ, ಚಿಂಪುಗಾನಹಳ್ಳಿ ರವಿ,ನೇಗಲಾಲ ಸಿದ್ದೇಶ್ ಸೇರಿದಂತೆ ಮಾದಿಗ ಸಮುದಾಯದ ವಿವಿಧ ಮುಖಂಡರುಗಳು ಹಲವರು ಉಪಸ್ಥಿತರಿದ್ದರು.

## 'ರಾಜ್ಯದ ಜನ ಸರ್ಕಾರದ ಬದಲಾವಣೆ ಬಯಸಿದ್ದಾರೆ'

### ಶಾಸಕ ಜ್ಯೋತಿಗಣೇಶ್ ನಿವಾಸಕ್ಕೆ ಮಾಜಿ ಸಿಎಂ ಯಡಿಯೂರಪ್ಪ ಭೇಟಿ



ತುಮಕೂರು: ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿಗೆ ರಾಜ್ಯದ ಜನ ಬೆಸತ್ತಿದ್ದಾರೆ, ಬದಲಾವಣೆ ಬಯಸಿದ್ದಾರೆ, ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸರ್ಕಾರವನ್ನು ನೂರಕ್ಕೆ ನೂರರಷ್ಟು ಬೆಂಬಲಿಸುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಬಿಜೆಪಿ ಖಜಾಂಚಿ ಡಾ.ಎಸ್.ಪರಮೇಶ್ ಅವರ ಪುತ್ರಿಯ ವಿವಾಹ ಸಮಾರಂಭದಲ್ಲಿ ಭಾಗವಹಿಸಲು ಶುಕ್ರವಾರ ನಗರಕ್ಕೆ ಆಗಮಿಸಿದ್ದ ಯಡಿಯೂರಪ್ಪನವರು ನಂತರ ಶಾಸಕ ಜಿ.ಬಿ.ಜ್ಯೋತಿಗಣೇಶ್ ಅವರ ನಿವಾಸಕ್ಕೆ ಆಗಮಿಸಿ ಉಪಹಾರ ಸೇವನೆ ಮಾಡಿದರು.

ಈ ವೇಳೆ ಮಾಧ್ಯಮದವರೊಂದಿಗೆ ಮಾತಾಡಿದ ಬಿಎಸ್‌ವೈ, ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಪಕ್ಷದ ಮುಖಂಡರು, ಕಾರ್ಯಕರ್ತರು ಹಗಲು ರಾತ್ರಿ ಶ್ರಮಿಸಿ ಪಕ್ಷದ ಕೆಲಸ ಮಾಡುತ್ತಿದ್ದಾರೆ ಎಂದ ಅವರು, ದೇವೇಗೌಡರು ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರು ಪಕ್ಷದ ದೆಹಲಿ ನಾಯಕರೊಂದಿಗೆ ಮಾತುಕತೆ ನಡೆಸಿದ್ದಾರೆ, ಮುಂದಿನ ಚುನಾವಣೆಗಳಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರೆಯಲಿದೆ ಎಂದು ಹೇಳಿದರು.

ಮೆಟ್ರೋ ರೈಲು ಪ್ರಯಾಣ ದರ ಏರಿಕೆ ಬಗ್ಗೆ ಮಾತನಾಡಿದ ಅವರು, ದಿನಬಳಕೆ ಪದಾರ್ಥಗಳ ಬೆಲೆ ದುಬಾರಿಯಾಗಿದೆ. ಇಂತಹ ಸಂದರ್ಭದಲ್ಲಿ ಮೆಟ್ರೋ ಪ್ರಯಾಣ ದರ ಏರಿಕೆ ಮಾಡಿರುವುದು ಸಾಮಾನ್ಯಜನರಿಗೆ ಹೊರೆಯಾಗಿದೆ, ಹೆಚ್ಚಿಸಿರುವ ದರ ವಾಪಸ್ ಪಡೆಯುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸುವುದಾಗಿ ಹೇಳಿದರು.

ಈ ವೇಳೆ ಶಾಸಕ ಜಿ.ಬಿ.ಜ್ಯೋತಿಗಣೇಶ್, ಮಾಜಿ ಸಂಸದ ಜಿ.ಎಸ್.ಬಸವರಾಜು, ಬಿಜೆಪಿ ಮುಖಂಡರಾದ ಎಸ್.ಪಿ.ಚಿದಾನಂದ್, ಪ್ರದೀಪ್‌ಕುಮಾರ್, ಮರಿಸ್ವಾಮಿ, ಟಿ.ಆರ್.ಸದಾಶಿವಯ್ಯ, ನವಚೇತನ್, ಹೆಚ್. ಎನ್.ದೀಪಕ್, ಶಂಕರ್, ರುದ್ರೇಶ್ ಮೊದಲಾದವರು ಹಾಜರಿದ್ದರು.

## ಸರ್ಕಾರಿ ಕಚೇರಿಗಳಿಗೆ ಸಾರ್ವಜನಿಕರನ್ನು ಅಲೆದಾಡಿಸಬಾರದೆಂಬ ಉದ್ದೇಶದಿಂದ ಮನೆಬಾಗಿಲಿಗೆ ಮನೆ ಮಗ ಕಾರ್ಯಕ್ರಮ

ಚಿಕ್ಕನಾಯಕನಹಳ್ಳಿ:-ಬೇಸಿಗೆ ಹತ್ತಿರ ಬರುತ್ತಿದ್ದು ಕುಡಿಯುವ ನೀರಿನ ಹಾಗೂ ರೈತರಿಗೆ ವಿದ್ಯುತ್ ಪೂರೈಕೆಯಲ್ಲಿ ತೊಂದರೆಯಾಗದಂತೆ ಹೆಚ್ಚು ಅದ್ಯತೆ ನೀಡಿ ಕೆಲಸ ಮಾಡಿ ಅಧಿಕಾರಿಳು ಜನರ ಸಮಸ್ಯೆಗಳನ್ನು ತಿಳಿದು ಸರಿಯಾದ ರೀತಿಯಲ್ಲಿ ಬಗೆಹರಿಸಿದರೆ ಅದೇ ಅವರಿಗೆ ನೀವು ಮಾಡುವ ಸೇವೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ತಾಲ್ಲೂಕಿನ ದುಗಡಿಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಕಾರೇಹಳ್ಳಿ ಗ್ರಾಮದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಮನೆಬಾಗಿಲಿಗೆ ಮನೆ ಮಗ ಶಿರ್ಷಿಕೆಯಡಿಯಲ್ಲಿನ 25ನೇ ವಾರದ ಜನಸ್ಪಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಅಧಿಕಾರಿಗಳನ್ನು, ಶಾಸಕರನ್ನು ಹುಡುಕಿಕೊಂಡು ಈ ಕ್ಷೇತ್ರದ ಜನರು ಅಲೆದಾಡಬಾರದು ಎಂದು ಕಳೆದ 100ವಾರಗಳಿಂದ ಪಟ್ಟಣದ ತೀನಂಶ್ರೀ ಭವನದಲ್ಲಿ ಪ್ರತಿ ಸೋಮವಾರ ಜನಸ್ಪಂದನಾ ಕಾರ್ಯಕ್ರಮ ಮಾಡಲಾಗುತ್ತಿದೆ ಈ ಕಾರ್ಯಕ್ರಮಕ್ಕು ಬರಲು ಸಾಧ್ಯವಾಗದಂತಹ ಜನರು ಗ್ರಾಮಗಳಲ್ಲಿದ್ದು ಅವರಿಗಾಗಿ ವಿಶೇಷವಾಗಿ ಈ ಮನಬಾಗಿಲಿಗೆ ಮನೆಮಗ ಕಾರ್ಯಕ್ರಮವನ್ನು ಆಯೋಜಿಸಿದ್ದು ಕಳೆದ 25ವಾರಗಳಿಂದಲೂ ಈ ಕಾರ್ಯಕ್ರಮವನ್ನು ಪ್ರತಿ ಶುಕ್ರವಾರ ಏರ್ಪಡಿಸಲಾಗುತ್ತಿದೆ ಹಳ್ಳಿಗಳಿಗೆ ಹೋಗಿ ಜನರ ಬಳಿಗೆ ಎಲ್ಲಾ ಇಲಾಖೆಯ ಅಧಿಕಾರಿಗಳೊಂದಿಗೆ ಬೇಟಿ ನೀಡಿ ಅವರ ವೈಯಕ್ತಿಕವಾಗಲಿ, ಸಾರ್ವಜನಿಕ ಸಮಸ್ಯೆಗಳನ್ನು ತಿಳಿದು ಅವುಗಳನ್ನು ಸಾಧ್ಯವಾದಷ್ಟು ಸ್ಥಳದಲ್ಲೇ ಬಗೆಹರಿಸುವಂತಹ ಕೆಲಸವನ್ನು ಈ ಕಾರ್ಯಕ್ರಮದಲ್ಲಿ ಮಾಡಲಾಗುತ್ತಿದೆ ಎಂದ ಅವರು ಕಾರೇಹಳ್ಳಿಗೆ ಶಾಶ್ವತವಾಗಿ ನೀರನ್ನು ಹರಿಸಲು ಸಂಬಂಧ ಪಟ್ಟ ನೀರಾವರಿ ಇಲಾಖೆಯ ಇಂಜನಿಯರ್‌ರವರೊಂದಿಗೆ ಸ್ಥಳದಲ್ಲೇ ಚರ್ಚಿಸಿದರು. ದುಗಡಿಹಳ್ಳಿ ಗ್ರಾ.ಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಈಗಾಗಲೇ ಒಟ್ಟು ಸು.75ಲಕ್ಷಕ್ಕು ಹೆಚ್ಚು ಅನುದಾನದಲ್ಲಿ ಶಾಲೆಕೊಠಡಿ, ಅಂಗನವಾಡಿ ಕಟ್ಟಡ, ರಸ್ತೆದುರಸ್ತಿ, ಗ್ರಂಥಾಲಯ ದುರಸ್ಥಿ, ಕೆರೆ ಏರಿ ರಿಪೇರಿ, ಸೇರಿದಂತೆ ನೂತನ ಗ್ರಾಮಪಂಚಾಯಿತಿ ಕಟ್ಟಡವನ್ನು ನಿರ್ಮಿಸಲಾಗಿದೆ ಎಂದ ಅವರು ಇದೇ ತಿಂಗಳ 16ರಂದು ಪಟ್ಟಣದ ಹೈಸ್ಕೂಲ್ ಮೈದಾನದಲ್ಲಿ ಬೃಹತ್ ವೈದ್ಯಕೀಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು ಇದರಲ್ಲಿ ಕೇವಲ ಪರೀಕ್ಷೆ ಮಾಡುವದಷ್ಟೇ ಅಲ್ಲದೇ ಅವರಿಗೆ ಸೂಕ್ತ ಚಿಕಿತ್ಸೆಗೂ ವ್ಯವಸ್ಥೆ ಮಾಡಲಾಗುವುದು ಅದ್ದರಿಂದ ಜನರು ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.



> ಬ್ರೋಕರ್‌ಗಳಿಗೆ ಕಡಿವಾಣ ಹಾಕುವುದು , ಸಾರ್ವಜನಿಕರನ್ನು ಸರ್ಕಾರಿ ಕಚೇರಿಗಳಿಗೆ ಅಲೆದಾಡಿಸಬಾರದೆಂಬ ಉದ್ದೇಶದಿಂದಲೇ ಆರಂಭಿಸಿದ ಕಾರ್ಯಕ್ರಮ ಮನೆಬಾಗಿಲಿಗೆ ಮನೆಮಗ ಕಾರ್ಯಕ್ರಮವಾಗಿದೆ ಬೇಸಿಗೆಯಲ್ಲಿ ಕುಡಿಯುವ ನೀರು ಹಾಗೂ ವಿದ್ಯುತ್‌ಗೆ ಹೆಚ್ಚಿನ ಅದ್ಯತೆ ನೀಡಿ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಬಗೆಹರಿಸಿ
>
> – ಶಾಸಕ ಸಿ.ಬಿ.ಸುರೇಶ್‌ಬಾಬು

ಪಿಎಲ್‌ಡಿ ಬ್ಯಾಂಕ್ ನ ಅಧ್ಯಕ್ಷ ಹೆಚ್.ಅರ್ .ಶಶಿದರ್ ಮಾತನಾಡಿ ರಾಜ್ಯದಲ್ಲೇ ಈ ರೀತಿಯ ವಿಶೇಷವಾಗಿ 100ಜನ ಸ್ಪಂದನಾ ಕಾರ್ಯಕ್ರಮ ಹಾಗೂ 25ವಾರಗಳ ಮನೆಬಾಗಿಲಿಗೆ ಮನೆಮಗ ಕಾರ್ಯಕ್ರಮವನ್ನು ಮಾಡುವ ಮೂಲಕ ತಮ್ಮ ಕ್ಷೇತ್ರದ ಜನತೆಯ ಸಮಸ್ಯೆಗಳನ್ನು ತಿಳಿಯುವಂತಹ ಶಾಸಕರು ಇಲ್ಲ ಅದರೆ ನಮ್ಮ ಶಾಸಕರು ಜನರಿಗೆ ಹತ್ತಿರವಾಗಿ ಅವರ ಕಷ್ಟಸುಖಗಳಿಗೆ ಸ್ಪಂದಿಸುತ್ತಿದ್ದಾರೆ ಇಂತಹ ಕಾರ್ಯಕ್ರಮಗಳನ್ನು ಸದ್ಬಳಕೆ ಮಾಡಿಕೊಳ್ಳಿ ಎಂದ ಅವರು ಜನರು ಇದರಲ್ಲಿ ಯಾವುದೆ ಪಕ್ಷ, ಜಾತಿ, ರಾಜಕೀಯವನ್ನು ಮಾಡದೇ ನಿಮ್ಮ ಯಾವುದೆ ಸಮಸ್ಯೆಗಳ ಬಗ್ಗೆ ಮನವಿಗಳನ್ನು ನೀಡಬಹುದು ಎಂದರು.

ಇಒ ದೊಡ್ಡಸಿದ್ದಯ್ಯ ಡಿ ಮಾತನಾಡಿ ರಾಜ್ಯದ ಯಾವುದೇ 224 ವಿಧಾನ ಸಭಾ ಕ್ಷೇತ್ರಗಳಲ್ಲಿ ಯಾರು ಈ ರೀತಿಯ ಕಾರ್ಯಕ್ರಮಗಳನ್ನು ಮಾಡಿಲ್ಲ. ಇಂದು 25ನೇ ವಾರದ ಕಾರ್ಯಕ್ರಮದಲ್ಲಿ ಗ್ರಾಮೀಣ ಭಾಗದ ಜನರ ಮೂಲಭೂತ ಸಮಸ್ಯೆಗಳನ್ನು ತಿಳಿದು ಅಲ್ಲೇ ಪರಿಹಾರ ನೀಡುವುದು ಹಾಗೂ ಜನರಿಂದ ಅಹವಾಲು ಸ್ವೀಕರಿಸುವುದಾಗಿದೆ. ಜನರು ತಮ್ಮ ಸಮಸ್ಯೆಗಳಿಗೆ ಸಾರ್ವಜನಿಕ ಕಚೇರಿಗಳಿಗೆ ಅಲೆದಾಡಬಾರದು ಎಂದು ಈ ಕಾರ್ಯಕ್ರಮದ ಆಯೋಜಿಸಿದ್ದು ನಿಮ್ಮ ಮನವಿಗಳನ್ನು ನೀಡಬಹುದು ಎಂದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮಮತಾ ಎಂ, ದುಗಡಿಹಳ್ಳಿ ಗ್ರಾ.ಪಂ.ಅಧ್ಯಕ್ಷೆ ಮಂಜುಳಾ, ಸದಸ್ಯರುಗಳಾದ ರಂಜಿತಾ, ಪ್ರಿಯಾಂಕ ಸೇರಿದಂತೆ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಕಾಂತರಾಜು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀದರ್, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆಯ ಎಇಇ ಮಾರುತಿ, ಸೇರಿದಂತೆ ಪಿಡಿಒ ಬೈರಪ್ಪ ಮತ್ತಿತರರು ಇದ್ದರು. ದುಗಡೀಹಳ್ಳಿ ಗ್ರಾ.ಪಂ.ವ್ಯಾಪ್ತಿಯ ಕಾರೇಹಳ್ಳಿ, ಹೆಸರಹಳ್ಳಿ, ವಡೇರಹಳ್ಳಿ, ಸಿದ್ದರಾಮನಗರ, ದುಗಡಿಹಳ್ಳಿ ಗ್ರಾಮಗಳಲ್ಲಿ ನಡೆದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವಿದ್ಯುತ್ ತಂತಿಗಳನ್ನು ಬದಲಾಯಿಸುವಂತೆ, ಕುಡಿಯುವ ನೀರಿನ ಸಮಸ್ಯೆ, ಸಮುದಾಯ ಭವನ ನಿರ್ಮಿಸುವಂತೆ, ಖಾತೆಮಾಡಿಕೊಡುವಂತೆ, ರಸ್ತೆ ನಿರ್ಮಿಸುವಂತೆ ಹಾಗೂ ನಿರಂತರ ಜ್ಯೋತಿ ಸಂಪರ್ಕ ಕೊಡಿಸುವಂತೆ ಸೇರಿದಂತೆ ಇತರೆ ಅರ್ಜಿಗಳು ಸಭೆಯಲ್ಲಿ ಸಲ್ಲಿಕೆಯಾದವು.

## ಅತಿ ಶೀಘ್ರದಲ್ಲಿ 10. ಸಾವಿರ ನಿವೇಶನಗಳ ಹಕ್ಕು ಪತ್ರ



ಶಿರಾ : ಶಿರಾ ನಗರ ಹಾಗೂ ಗ್ರಾಮೀಣ ಪ್ರದೇಶದ ಬಡ ಕುಟುಂಬದ ಅರ್ಹ ಫಲಾನುಭವಿಗಳಿಗೆ ಅತಿ ಶೀಘ್ರದಲ್ಲಿ 10. ಸಾವಿರ ನಿವೇಶನಗಳ ಹಕ್ಕು ಪತ್ರ ನೀಡುವ ಮಹತ್ವಕಾಂಕ್ಷಿಯ ಕೆಲಸ ಅತಿ ಶೀಘ್ರದಲ್ಲಿಯೇ ನಡೆಯಲಿದೆ ಎಂದು ದೆಹಲಿ ವಿಶೇಷ ಪ್ರತಿನಿಧಿ, ಶಾಸಕ ಟಿ.ಬಿ.ಜಯಚಂದ್ರ ಹೇಳಿದರು.ಶಿರಾ ತಾಲೂಕಿನ ಯಲಿಯೂರು ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಂಗನವಾಡಿ ಕೇಂದ್ರದ ಕಟ್ಟಡವನ್ನು ಶುಕ್ರವಾರ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ನಮ್ಮ ಮೇಲಿದ್ದು, ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಕಾಡುತ್ತಿರುವ ಅಪೌಷ್ಟಿಕ ಕೊರತೆಯನ್ನು ನೀಗಿಸಲು ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿದ್ದು, ತಾಯಂದಿರು ಗರ್ಭಾವಸ್ಥೆಯಲ್ಲಿಯೇ ಪೌಷ್ಟಿಕ ಆಹಾರ ಸೇವನೆ ಮಾಡಿದರೆ ಮಗು ಕೂಡ ಆರೋಗ್ಯವಾಗಿರಲಿದೆ.

ತಾಯಿ ಮತ್ತು ಮಕ್ಕಳ ಆರೋಗ್ಯ ದೃಷ್ಟಿಯಿಂದ ಶಿರಾತಾಯಿ ಮತ್ತು ಮಕ್ಕಳ ಆಸ್ಪತ್ರೆ ಸ್ಥಾಪನೆ ಮಾಡಿ ಗುಣಮಟ್ಟದ ಚಿಕಿತ್ಸೆ ನೀಡುತ್ತಿರುವ ಕಾರಣ ಜಿಲ್ಲೆಯಲ್ಲಿಯೇ ಉತ್ತಮ ತಾಯಿ ಮಕ್ಕಳ ಆಸ್ಪತ್ರೆ ಎಂಬ ಹೆಗ್ಗಳಿಕೆ ಶಿರಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಸಲ್ಲುತ್ತದೆ. ನಮ್ಮ ಆರೋಗ್ಯ ನಮ್ಮ ಕೈಯಲ್ಲಿ ಎಂಬ ಧ್ಯೇಯ ವಾಕ್ಯದೊಂದಿಗೆ ಪೌಷ್ಟಿಕಾಂಶವುಳ್ಳ ತರಕಾರಿ ಹೆಚ್ಚು ಸೇವನೆ ಮಾಡಿದರೆ ಆರೋಗ್ಯ ಸ್ಥಿರವಾಗಿರಲಿದೆ. ಬದಲಾಗುತ್ತಿರುವ ತಂತ್ರಜ್ಞಾನದಿಂದ ಮಕ್ಕಳು ಮೊಬೈಲ್ ನೋಡುವ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುತ್ತಿದ್ದಾರೆ, ದಯವಿಟ್ಟು ತಾಯಂದಿರು ತಮ್ಮ ಪುಟ್ಟ ಮಕ್ಕಳಿಗೆ ಮೊಬೈಲ್ ಕೊಡಬಾರದು ಎಂದರು.

## ಸಿದ್ದಗಂಗಾ ವಸ್ತು ಪ್ರದರ್ಶನ: ಜನರು ಕುಟುಂಬ ಸಮೇತ ಬಂದು ನೋಡುವಂತಹದ್ದು

ತುಮಕೂರು: ಸಿದ್ದಗಂಗಾ ವಸ್ತು ಪ್ರದರ್ಶನದಲ್ಲಿ ಯುವ ಜನರಿಗೆ, ರೈತರಿಗೆ ಮತ್ತು ಸಾರ್ವಜನಿಕರಿಗೆ ಕಲಿಯುವಂತಹ ಸಾಕಷ್ಟು ವಿಚಾರಗಳಿದ್ದು, ಜನರು ಕುಟುಂಬ ಸಮೇತ ಬಂದು ಇಂತಹ ವಸ್ತು ಪ್ರದರ್ಶನವನ್ನು ನೋಡಿ ಆನಂದಿಸುವಂತಾಗ ಬೇಕು ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ ತಿಳಿಸಿದ್ದಾರೆ.

ಸಿದ್ದಗಂಗಾ ಮಠದ ವತಿಯಿಂದ ಆಯೋಜಿಸಿದ್ದ 64ನೇ ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡುತಿದ್ದ ಅವರು, ವಸ್ತು ಪ್ರದರ್ಶನದಲ್ಲಿ ಅರ್ಟಿಪಿಷಿಯಲ್ ಇಂಟಲಿಜೆನ್ಸ್ ಹಾಗೂ ಇನ್ನಿತರ ಅತ್ಯಾಧುನಿಕ ವಿಷಯಗಳ ಕುರಿತು ಮಕ್ಕಳು ಪ್ರಾತಕ್ಷಿಕಗಳನ್ನು ರಚಿಸಿ, ಅದನ್ನು ಬಂದವರಿಗೆ ವಿವರಿಸುವ ಮೂಲಕ ತಾವುಕಲಿತು, ಇತರರಿಗೂ ಕಲಿಸುವ ಕೆಲಸ ಮಾಡುತ್ತಿದ್ದಾರೆ. ನಿಜಕ್ಕೂಇದು ಸಂತೋಷ ತರುವ ಕೆಲಸ ಎಂದರು.

ಕಳೆದ ವರ್ಷ ನಾನು ನನ್ನ ಮಕ್ಕಳೊಂದಿಗೆ ವಸ್ತು ಪ್ರದರ್ಶನದ ಪ್ರತಿ ಮಳಿಗೆಗೆ ಹೋಗಿ, ಅಲ್ಲಿನ ಮಾಹಿತಿ ತಿಳಿದುಕೊಳ್ಳುವ ಮೂಲಕ ಸರಕಾರ ಜನರಿಗಾಗಿ ಏನೇನು ಯೋಜನೆಗಳನ್ನು ಜಾರಿಗೆ ತಂದಿದೆ.ಅವುಗಳ ಉಪಯೋಗಗಳೇನು ಎಂಬುದನ್ನು ಮನವರಿಕೆ ಮಾಡಿಕೊಟ್ಟಿದ್ದೇನೆ. ನನ್ನ ಹಾಗೆಯೇ ಸಾರ್ವಜನಿಕರು ಸಹ ತಮ್ಮಕುಟುಂಬದೊಂದಿಗೆ ಭೇಟಿ ನೀಡಿ ಮಕ್ಕಳಿಗೆ ಮಾಹಿತಿ ಒದಗಿಸುವ ಕೆಲಸ ಮಾಡಬೇಕೆಂದು ಶುಭಕಲ್ಯಾಣ ತಿಳಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಮಾತನಾಡಿದ ನಗರ ಶಾಸಕ ಜಿ.ಬಿ.ಜೋತಿಗಣೇಶ್, ಆರು ದಶಕಗಳ ಹಿಂದೆ ಡಾ.ಶ್ರೀಶಿವಕುಮಾರ ಸ್ವಾಮಿಜಿಗಳು ಜನರಿಗೆ ಮಾಹಿತಿ ನೀಡುವ ಸಲುವಾಗಿ ಆರಂಭಿಸಿದ ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನ ನಿರಂತರವಾಗಿ ನಡೆದು ಕೊಂಡು ಬರುತ್ತಿದೆ. ಶ್ರೀಮಠದ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ, ಸಾರ್ವಜನಿಕ ಸೇವೆಯಲ್ಲಿಯೂ ತೊಡಗಿಸಿಕೊಂಡಿದೆ. ಕೃಷಿ ಮತ್ತು ಇತರೆ ಕ್ಷೇತ್ರಗಳಲ್ಲಿ ಆಗಿರುವ ಹೊಸ ಹೊಸ ಬೆಳವಣಿಗೆಯ ಕುರಿತುಜನರಿಗೆ ಮಾಹಿತಿ ಜೊತೆಗೆ ಮಾರ್ಗದರ್ಶನ ಒದಗಿಸುವ ಕೆಲಸ ಮಾಡಲಾಗುತ್ತಿದೆ.ಇದರ ಉಪಯೋಗವನ್ನು ಜನರು ಪಡೆದು ಕೊಳ್ಳುವ ಮೂಲಕ ಅವರ ಆರಂಭಿಸಿದ ವಸ್ತು ಪ್ರದರ್ಶನವನ್ನು ಯಶಸ್ವಿಗೊಳಿಸಬೇಕೆಂದರು.



ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀಸಿದ್ದಗಂಗಾ ಮಠಾಧ್ಯಕ್ಷ ಶ್ರೀಶ್ರೀಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಸಿದ್ದಗಂಗಾ ಮಠದಲ್ಲಿ ನಡೆಯುತ್ತಿರುವ ಈ ಜಾತ್ರೆಗೆ ಶತಮಾನಗಳ ಇತಿಹಾಸವಿದೆ. ಉದ್ಯಾನ ಶಿವಯೋಗಿಗಳು ಆರಂಭಿಸಿದ ಈ ಜಾತ್ರೆಯನ್ನು, ಶ್ರೀಶಿವಕುಮಾರ ಸ್ವಾಮೀಜಿಗಳು ಕೃಷಿ ಮತ್ತು ಕೈಗಾರಿಕೆಗಳ ಮಾಹಿತಿ ನೀಡಲು ವಸ್ತು ಪ್ರದರ್ಶನ ಆರಂಭಿಸಿದರು. ಅಂದಿನಿಂದ ಇಂದಿನವರೆಗೆ ನಿರಂತರವಾಗಿ ವಸ್ತು ಪ್ರದರ್ಶನ ನಡೆಯುತ್ತಿದೆ. ಜಾನುವಾರುಗಳ ಕ್ರಯ, ವಿಕ್ರಯಕ್ಕೆ ಸಿದ್ದಗಂಗಾ ಜಾತ್ರೆ ಒಂದು ಉತ್ತಮ ವೇದಿಕೆಯಾಗಿದೆ. ಕೋವಿಡ್ ಕಾಲದಲ್ಲಿಯೂ ಜಾತ್ರೆ ನಿಂತಿಲ್ಲ ಎಂಬುದೇ ವಿಶೇಷ. ಕಲೆ,ಸಾಹಿತ್ಯ, ಸಂಗೀತ, ನೃತ್ಯ, ನಾಟಕಗಳ ಮನರಂಜನೆಯ ಜೊತೆಗೆ, ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಮೀನುಗಾರಿಕೆ, ರೇಷ್ಮೆ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಕೃಷಿ ಇಲ್ಲದೆ ಬದುಕು ಇಲ್ಲ. ಹಳ್ಳಿಗಾಡಿನ ಜನರಿಗೆ ಕೃಷಿಯ ಬಗ್ಗೆ ಕೊಂಚ ಅರಿವು ಇದೆ. ಆದರೆ ನಗರ ಪ್ರದೇಶದ ಜನರಿಗೆ ಕೃಷಿ ಬಗ್ಗೆ ಸ್ವಲ್ಪವೂ ತಿಳುವಳಿಕೆ ಇಲ್ಲ. ಭತ್ತ ಬೆಳೆಯುವುದರಲ್ಲಿ ಭಾರತ ಚೀನಾವನ್ನು ಹಿಂದಿಕ್ಕಿ ಮೊದಲನೇ ಸ್ಥಾನದಲ್ಲಿದೆ. ಇದು ಹೆಮ್ಮೆ ಪಡುವ ವಿಚಾರ. ಇಂತಹ ಹಲವಾರು ವಿಷಯಗಳನ್ನು ಈ ಕೃಷಿ ವಸ್ತು ಪ್ರದರ್ಶನದಲ್ಲಿ ತಿಳಿಯಬಹುದಾಗಿದೆ ಎಂದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಾಧೀಶರಾದ ನೂರುನ್ನಿಸಾ ಅವರು ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿದರು. ಈ ವೇಳೆ ಸಿದ್ದಗಂಗಾ ವಿದ್ಯಾಸಂಸ್ಥೆಯ ಸಿಇಓ ಜಯ ವಿಭವ ಸ್ವಾಮಿ, ವಸ್ತು ಪ್ರದರ್ಶನ ಟ್ರಸ್ಟನ ಕಾರ್ಯದರ್ಶಿ ಪ್ರೊ.ಬಿ.ಗಂಗಾಧರಯ್ಯ, ಜಂಟಿ ಕಾರ್ಯದರ್ಶಿ ಎಸ್.ಶಿವಕುಮಾರ್, ಕೆ.ಬಿ.ರೇಣುಕಯ್ಯ, ಸಾಂಸ್ಕೃತಿಕ ಸಂಚಾಲಕರಾದ ಉಮಾ ಮಹೇಶ್,ಸಹ ಸಂಚಾಲಕ ಎಂ.ನಂದೀಶ್‌ಮತ್ತಿತರರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಆರ್ಚರಿ ಕ್ರೀಡಾಕೂಟದಲ್ಲಿ ನಿಟ್ಟೂರಿನ ಸಾಯಿ ಸುಮುಖ್ ಗೆ ರಜತ ಕಂಚು ಪದಕ



ಗುಬ್ಬಿ: ತಾಲ್ಲೂಕಿನ ನಿಟ್ಟೂರು ಗ್ರಾಮದ ಎನ್.ಪಿ.ಸುಮುಖ್ ರಾಷ್ಟ್ರೀಯ ಆರ್ಚರಿ ಕ್ರೀಡಾಕೂಟದಲ್ಲಿ 19 ವರ್ಷದೊಳಗಿನ ವಿಭಾಗದಲ್ಲಿ ರಜತ ಪದಕ ಹಾಗೂ 17 ವರ್ಷದೊಳಗಿನ ವಿಭಾಗದಲ್ಲಿ ಕಂಚಿನ ಪದಕ ಗಳಿಸಿ ಗುಬ್ಬಿ ತಾಲ್ಲೂಕಿಗೆ ಕೀರ್ತಿ ತಂದಿದ್ದಾರೆ. ನಿಟ್ಟೂರಿನ ಮೈಸೂರು ರಸ್ತೆಯಲ್ಲಿನ ಬಾಲಾಜಿ ಪೈಂಟ್ಸ್ ಅಂಡ್ ಹಾರ್ಡ್‌ವೇರ್ ಮಾಲೀಕರಾದ ಎನ್. ಆರ್.ಪ್ರಶಾಂತ್ ಹಾಗೂ ರೇವತಿ ದಂಪತಿಯ ಸುಪುತ್ರನಾದ ಎನ್.ಪಿ.ಸಾಯಿ ಸುಮುಖ್ ಈಚೆಗೆ ಮಹಾರಾಷ್ಟ್ರದ ಆಲಿಬಾಗ್ ನಗರದಲ್ಲಿ ನಡೆದ ರಾಷ್ಟ್ರೀಯ ಒಳಾಂಗಣ ಆರ್ಚರಿ (ಬಿಲ್ಲುಗಾರಿಕೆ) ಸ್ಪರ್ಧೆಯಲ್ಲಿ ರಜತ ಮತ್ತು ಕಂಚು ಪದಕ ಗೆದ್ದಿದ್ದು ಈ ಹಿಂದೆ ರಾಜ್ಯ ಮಟ್ಟದಲ್ಲಿ ಚಿನ್ನದ ಪದಕ ಹಾಗೂ ಪೂನಾದಲ್ಲಿ ನಡೆದ ಸಿಬಿಎಸ್ಸಿ ಬೋರ್ಡ್ ಕ್ರೀಡಾಕೂಟದಲ್ಲಿ ರಜತ ಪದಕ ಗಳಿಸಿದ್ದು ಹೆಮ್ಮೆ ತಂದಿದೆ ಎನ್ನುತ್ತಾರೆ ನಿಟ್ಟೂರಿನ ಗ್ರಾಮಸ್ಥರು.

ಪ್ರಸ್ತುತ ದಾವಣಗೆರೆ ಪಿಎಆರ್ ಬೋರ್ಡಿಂಗ್ ಸ್ಕೂಲ್ ನಲ್ಲಿ ಒಂಬತ್ತನೇ ತರಗತಿ ಓದುತ್ತಿರುವ ಸಾಯಿ ಸುಮುಖ್ 14 ನೇ ವಯಸ್ಸಿನಲ್ಲಿಯೇ ಆರ್ಚರಿ ಬಿಲ್ಲು ವಿದ್ಯೆಯಲ್ಲಿ ವಯಸ್ಸು ಮೀರಿದ ಸಾಧನೆ ತೋರಿದ್ದಾನೆ. ತರಬೇತುದಾರ ಅನಿಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ನ್ಯಾಷನಲ್ ಪದಕ ಗಳಿಸಿದ್ದು ಹೆಮ್ಮೆ ತಂದಿದೆ. ದೇಶದ ನಾನಾ ಭಾಗಗಳಿಂದ ನೂರಾರು ಮಂದಿ ಸ್ಪರ್ಧಿಗಳ ಮಧ್ಯೆ ಎರಡನೇ ಹಾಗೂ ಮೂರನೇ ಸ್ಥಾನ ಗಳಿಸುವುದು ಸುಲಭವಲ್ಲ. ಕಳೆದೆರಡು ವರ್ಷದಲ್ಲಿ ಈ ಮಟ್ಟದ ಸಾಧನೆ ಮುಂದಿನ ಭವಿಷ್ಯ ರೂಪಿಸುತ್ತಿದೆ ಎಂದು ಸಾಯಿ ಸುಮುಖನ ತಂದೆ ಎನ್.ಆರ್.ಪ್ರಶಾಂತ್, ತಾಯಿ ರೇವತಿ ತಮ್ಮ ಸಂತೋಷ ಹಂಚಿಕೊಂಡರು.

# ಇಂದಿನಿಂದ ವಿದ್ಯಾರ್ಥಿ ಜಾನಪದ ಲೋಕೋತ್ಸವ

ರಾಮನಗರ: ಕರ್ನಾಟಕ ಜಾನಪದ ಪರಿಷತ್ತು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ವಿದ್ಯಾರ್ಥಿ ಜಾನಪದ ಲೋಕೋತ್ಸವ–2026 ಅನ್ನು ಫೆ.7ರ ಶನಿವಾರ ಹಾಗೂ ಫೆ.8ರ ಭಾನುವಾರ ರಾಮನಗರ ಜಾನಪದ ಲೋಕದಲ್ಲಿ ಆಯೋಜಿಸಲಾಗಿದೆ. ಫೆ. 7ರ ಶನಿವಾರ ಬೆಳಿಗ್ಗೆ 10.30ಕ್ಕೆ ಶ್ರೀ ಆದಿಚುಂಚನಗಿರಿ ಶಾಖಾ ಮಠಾಧೀಶರಾದ ಶ್ರೀ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ ಅವರ ದಿವ್ಯ ಸಾನಿಧ್ಯದಲ್ಲಿ ಚಲನಚಿತ್ರ ಮತ್ತು ರಂಗಭೂಮಿಯ ಪ್ರಖ್ಯಾತ ನಿರ್ದೇಶಕರಾದ ಡಾ. ಟಿ.ಎಸ್. ನಾಗಾಭರಣ ಅವರು ಲೋಕೋತ್ಸವ ಉದ್ಘಾಟಿಸುವರು. ಮುಖ್ಯಮಂತ್ರಿಗಳ ಪತ್ರಿಕಾ ಕಾರ್ಯದರ್ಶಿಗಳಾದ ಕೆ.ವಿ. ಪ್ರಭಾಕರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ. ರಾಜು ಅವರು ಕರಕುಶಲ ಮೇಳ ಉದ್ಘಾಟಿಸುವರು. ರಾಮನಗರ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಹಿ.ಚಿ. ಬೋರಲಿಂಗಯ್ಯ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು ಹಾಗೂ ಮ್ಯಾನೇಜಿಂಗ್ ಟ್ರಸ್ಟಿ ಆದಿತ್ಯ ನಂಜರಾಜ್ ಅವರು ಸ್ವಾಗತಿಸುವರು. ಅಂದು ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 9.30ರ ವರೆಗೆ ಜನಪದ ಕಲಾಪ್ರದರ್ಶನ ಆಯೋಜಿಸಲಾಗಿದೆ. ರಾತ್ರಿ 8 ರಿಂದ 9 ಗಂಟೆಯವರೆಗೆ ಜನಪದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಕೆರೆಗೆ ಹಾರ ಜನಪದ ರೂಪಕ ಏರ್ಪಡಿಸಲಾಗಿದೆ.

# ಗ್ರಾ.ಪಂ. ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೇವಾಲಯ

ರಾಮನಗರ : ಗ್ರಾಮ ಪಂಚಾಯಿತಿ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೇವಾಲಯವಿದ್ದಂತೆ. ಗ್ರಾಮದ ಅಭಿವೃದ್ಧಿಯ ಬಗ್ಗೆ ಪ್ರತಿಯೊಬ್ಬ ಸಾರ್ವಜನಿಕರೂ ಸಹ ಚಿಂತಿಸಿ, ತಮ್ಮ ಪಾಲಿನ ಜವಾಬ್ದಾರಿ, ಕರ್ತವ್ಯ ನಿರ್ವಹಿಸಬೇಕೆಂದು ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.



ತಾಲ್ಲೂಕಿನ ಕೈಲಾಂಚ ಹೋಬಳಿಯ ವಿಭೂತಿಕೆರೆ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಗ್ರಾಪಂ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು. ಸ್ಥಳೀಯ ಸಂಸ್ಥೆಗಳ ಸಬಲೀಕರಣಕ್ಕೆ ಸರ್ಕಾರ ಶ್ರಮ ವಹಿಸಿದೆ. ಆಡಳಿತ ವಿಕೇಂದ್ರೀಕರಣದ ಮೂಲಕ ಸ್ಥಳೀಯ ಸಂಸ್ಥೆಗಳಲ್ಲಿ ಶಕ್ತಿ ತುಂಬಲಾಗಿದೆ. ಗ್ರಾಮ ಪಂಚಾಯಿತಿಗಳ ಉತ್ತಮ ಕಾರ್ಯ ನಿರ್ವಹಣೆಗೆ ಅನುಕೂಲವಾಗಲು ಸುಸಜ್ಜಿತ ಕಟ್ಟಡ ಒದಗಿಸಲು ಗಮನ ನೀಡಲಾಗಿದೆ ಎಂದರು.ಗ್ರಾಮ ಪಂಚಾಯತಿ ಒಂದು ದೇವಾಲಯವಿದ್ದಂತೆ. ಜನರ ಕಷ್ಟ ಸುಖ ಅಹವಾಲು ಕೇಳುವ ಸ್ಥಳವಾಗಿದೆ. ಆಸಕ್ತಿ ವಹಿಸಿ ಭೂಮಿಪೂಜೆಯಾದ ಕೆಲವೇ ತಿಂಗಳಲ್ಲಿ ನವೀನ ರೀತಿಯಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣವಾಗಿದೆ. ಇದಕ್ಕೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಬೇಕು. ಇಂತಹ ಕಟ್ಟಡದ ಅವಶ್ಯಕತೆ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಇದೆ. ಇಲ್ಲಿನ ಅಧ್ಯಕ್ಷರು, ಸದಸ್ಯರು ಅಧಿಕಾರಿ, ಸಿಬ್ಬಂದಿ ವರ್ಗ ಹಾಗೂ ಸಾರ್ವಜನಿಕರ ಉತ್ತಮ ಸಹಕಾರದಲ್ಲಿ ಉತ್ತಮವಾಗಿ ಕಟ್ಟಡ ನಿರ್ಮಾಣಗೊಂಡಿದೆ ಎಂದು ಹೇಳಿದರು.

ಸರ್ಕಾರ ಮತ್ತು ತಮ್ಮ ಶಾಸಕರ ನಿಧಿಯಿಂದ ಕಟ್ಟಡಕ್ಕೆ ಅನುದಾನ ನೀಡಲಾಗಿದೆ. ಮೇಲ್ಮಹಡಿಯಲ್ಲೂ ಕಟ್ಟಡ ಕಟ್ಟಬೇಕಿದ್ದು, ಅನುದಾನ ಒದಗಿಸಲು ಚಿಂತಿಸಲಾಗಿದೆ. ಗ್ರಾಪಂ ಅಭಿವೃದ್ಧಿಗೆ ಮತ್ತಷ್ಟು ಶ್ರಮಿಸಿ ಜನೋಪಯೋಗಿ ಕೆಲಸ ಮಾಡಲಿ ಎಂದು ಶುಭ ಹಾರೈಸಿದರು.

> ವಿಕೇಂದ್ರೀಕರಣ ವ್ಯವಸ್ಥೆಯ ಭಾಗವಾಗಿರುವ ಗ್ರಾಮ ಪಂಚಾಯಿತಿ ಚುನಾಯಿತ ಜನಪ್ರತಿನಿಧಿಗಳ ಮತ್ತು ಜನರ ನಡುವಿನ ಸಂಪರ್ಕ ಕೊಂಡಿಯಾಗಿದೆ. ಗ್ರಾಮಗಳ ಅಭಿವೃದ್ಧಿಗೆ ಗ್ರಾಮ ಪಂಚಾಯಿತಿಗಳು ಅವಶ್ಯಕವಾಗಿವೆ. ವಿಭೂತಿಕೆರೆ ಗ್ರಾಪಂ ಉತ್ತಮವಾಗಿ ಕಾರ್ಯ ನಿರ್ವಹಣೆ ಮಾಡುತ್ತಿದ್ದು ಮುಂದಿನ ದಿನಗಳಲ್ಲಿ ಮಾದರಿ ಗ್ರಾಪಂ ಆಗಿ ಹೆಸರು ಪಡೆಯಲಿ ಎಂದು ಆಶಿಸಿದ.
>
> ಶ್ರೀ ಮೃತ್ಯುಂಜಯ ಶಿವಾಚಾರ್ಯ ಸ್ವಾಮೀಜಿ, ಬೇವೂರು ಮಠಾಧ್ಯಕ್ಷರು,

ಗ್ರಾಪಂ ಅಧ್ಯಕ್ಷೆ ಸುನೀತಾ ನಾಗರಾಜ್ ಸಿಂಗ್ ಮಾತನಾಡಿ, ಗ್ರಾಪಂ ಕಟ್ಟಡ ವಿಭೂತಿಕೆರೆಯಲ್ಲಿ ಅವಶ್ಯಕತೆ ಇತ್ತು. ಇದನ್ನು ಮನಗಂಡು ಆಡಳಿತ ಮಂಡಳಿ ಎಲ್ಲಾ ಸದಸ್ಯರು ಮತ್ತು ಗ್ರಾಮಸ್ಥರ ಸಹಕಾರ ಪಡೆದು ಹೊಸ ಜಾಗದಲ್ಲಿ ಸರ್ಕಾರದ ಅನುದಾನ ಮತ್ತು ಶಾಸಕರ ಅನುದಾನ ಬಳಸಿಕೊಂಡು ಅಧಿಕಾರಿಗಳ ಸಹಕಾರದಲ್ಲಿ ಉತ್ತಮ ಕಟ್ಟಡ ನಿರ್ಮಾಣ ಮಾಡಲಾಗಿದೆ. ಸ್ವಚ್ಛತೆ, ಗ್ರಾಮ ನೈರ್ಮಲ್ಯ ಸೇರಿದಂತೆ ಇತರ ವಿಷಯಗಳಲ್ಲಿ ಸಾರ್ವಜನಿಕರು ಸಹಕಾರ ನೀಡಿದರೆ ಮಾದರಿ ಗ್ರಾಮ ನಿರ್ಮಿಸಲು ಸಾಧ್ಯವಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಕೆ. ರಾಜು, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ವಿ.ಹೆಚ್.ರಾಜು, ಪ್ರಾಧಿಕಾರ ಅಧ್ಯಕ್ಷ ಎ.ಬಿ.ಚೇತನ್‌ಕುಮಾರ್, ಪಿಡಿಒ ಬಿ.ಕೆ. ಗೋಮತಿ, ಉಪಾಧ್ಯಕ್ಷೆ ಮಂಗಳಗೌರಮ್ಮ ಗಿರಿಯಪ್ಪ, ಸದಸ್ಯರುಗಳಾದ ಮಹದೇಶ್ವಸ್ವಾಮಿ, ಪುಟ್ಟಸ್ವಾಮಯ್ಯ, ಮಲ್ಲೇಶ್, ರಂಗಸ್ವಾಮಿ, ಮಹದೇವಮ್ಮ, ಲೀಲಾವತಿ ಶಿವರಾಜು, ಜ್ಯೋತಿ ಬಾಲಕೃಷ್ಣ, ವೆಂಕಟಪ್ಪ, ಸುನೀತಾ, ಕೆ.ಪಿ. ವಿಶಾಲ, ಶೋಭಾ, ಲಕ್ಷ್ಮಮ್ಮ, ಶ್ರೀನಿವಾಸ್, ತಾಪಂ ಮಾಜಿ ಅಧ್ಯಕ್ಷ ಭದ್ರಯ್ಯ, ಎಸ್‌ಡಿಎ ಸುಜಾತ ತಾಪಂ ಸಹಾಯಕ ನಿರ್ದೇಶಕ ರೂಪೇಶ್‌ಕುಮಾರ್, ಜಿಪಂ ಇಂಜಿನಿಯರ್ ಸತ್ಯಪ್ರಕಾಶ್, ಕಾರ್ತಿಕ್ ಸೇರಿದಂತೆ ಹಲವರಿದ್ದರು.

# ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ಆರ್ಥಿಕ ಸ್ವಾವಲಂಬನೆ

ರಾಮನಗರ: ಫಾಸ್ಟ್ ಫುಡ್‌ಗಳಿಂದ ಆರೋಗ್ಯ ಸಮಸ್ಯೆಗಳ ಹೆಚ್ಚಾಗುತ್ತಿದ್ದು, ಜನರು ಹಿಂದಿನ ಆಹಾರ ಪದ್ಧತಿಯನ್ನು ಮತ್ತೆ ಅನುಸರಿಸಲು ಮುಂದಾಗುತ್ತಿದ್ದಾರೆ. ಇಂತಹ ಸಂದರ್ಭವನ್ನು ಗ್ರಾಮೀಣ ಕೃಷಿಕ ಮಹಿಳೆಯರು ಸದ್ಬಳಕೆ ಮಾಡಿಕೊಳ್ಳಬೇಕು. ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಧನರಾಜ್ ಅವರು ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್) ಹಾಗೂ ಕರ್ತವ್ಯ ಫೌಂಡೇಷನ್ ಸಹಯೋಗದೊಂದಿಗೆ ನಡೆದ ಹಲಸಿನ ಹಣ್ಣಿನ ಮೌಲ್ಯವರ್ಧನೆ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಜನರಲ್ಲಿ ಆರೋಗ್ಯ ಕಾಳಜಿ ಹೆಚ್ಚುತ್ತಿದೆ. ಸಾವಯವ ಮೌಲ್ಯವರ್ಧಿಕ ಆಹಾರ ಪದಾರ್ಥಗಳತ್ತ ಜನ ಹೆಚ್ಚು ಆಸಕ್ತಿ ತೋರುತ್ತಿದ್ದಾರೆ. ಇವುಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ. ದೊಡ್ಡ ಮಾಲ್‌ಗಳಲ್ಲೂ ಇಂತಹ ಆಹಾರ ಪದಾರ್ಥಗಳ



ಪ್ರತ್ಯೇಕ ಕೌಂಟರ್‌ಗಳು ತಲೆ ಎತ್ತುತ್ತಿವೆ. ಜನ ಫಾಸ್ಟ್ ಫುಡ್‌ನಿಂದ ಹಂತ ಹಂತವಾಗಿ ದೂರ ಸರಿಯಲು ಆರಂಭಿಸಿದ್ದಾರೆ.

ಈ ಸಂದರ್ಭವನ್ನು ಗ್ರಾಮೀಣ ಮಹಿಳೆಯರು ಸದ್ಬಳಕೆ ಮಾಡಿಕೊಳ್ಳಬೇಕು. ಸರಕಾರ ಮತ್ತು ಬ್ಯಾಂಕ್‌ಗಳು ನೀಡುವ ತರಬೇತಿ, ಸಾಲ ಸೌಲಭ್ಯಗಳನ್ನು ಬಳಸಿಕೊಂಡು, ಸೂಕ್ತ ಬ್ರಾಂಡಿಂಗ್ ಕೌಶಲ್ಯದೊಂದಿಗೆ ಕೃಷಿ ಮೌಲ್ಯವರ್ಧಿತ ಉತ್ಪನ್ನಗಳಿಗೆ ಮಾರುಕಟ್ಟೆಯನ್ನು ಕಟ್ಟಿಕೊಳ್ಳಬೇಕು ಎಂದರು.

ನಬಾರ್ಡ್ನ ಜಿಲ್ಲಾ ವ್ಯವಸ್ಥಾಪಕರಾದ ಬಿ.ವಿ.ಹರ್ಷಿತ ಅವರು ಮಾತನಾಡಿ, ಮಹಿಳೆಯರು ಆರ್ಥಿಕ ಸ್ವಾವಲಂಬನೆಗೆ ನಬಾರ್ಡ್ ಜೊತೆಗೆ ಅನೇಕ ಸಂಸ್ಥೆಗಳು ಶ್ರಮಿಸುತ್ತಿವೆ. ಸೂಕ್ತ ತರಬೇತಿ ಪಡೆದು ಮೌಲ್ಯವರ್ಧಿತ ಉತ್ಪನ್ನಗಳನ್ನು ತಯಾರಿಸುವ ಮೂಲಕ ಸ್ವಂತ ಉದ್ದಿಮೆಗಳನ್ನು ಸ್ಥಾಪಿಸಬಹುದು. ಇದಕ್ಕೆ ನಬಾರ್ಡ್ನಿಂದ ಸಂಪೂರ್ಣ ಸಹಕಾರ ದೊರೆಯಲಿದೆ ಎಂದರು.

ಕರ್ತವ್ಯ ಫೌಂಡೇಷನ್‌ನ ಸಂಸ್ಥಾಪಕರಾದ ರಾಜಶೇಖರ್ ಅವರು ಮಾತನಾಡಿ, ಕೀಟನಾಶಕ, ರಸಗೊಬ್ಬರದಿಂದ ಮುಕ್ತವಾಗಿರುವ ಏಕೈಕ ಹಣ್ಣು ಎಂದರೆ ಅದು ಹಲಸಿನ ಹಣ್ಣು. ಹಲಸಿನ ಹಣ್ಣು ತುಂಬ ಸಿಹಿಯಾದ ಹಣ್ಣು. ಪ್ರಸ್ತುತ ಸಮಾಜದಲ್ಲಿ ಮಧುಮೇಹ ಸಮಸ್ಯೆ ಹೆಚ್ಚಾಗುತ್ತಿರುವ ಕಾರಣ ಇದನ್ನು ತಿನ್ನುವವರ ಸಂಖ್ಯೆ ಕಡಿಮೆಯಾಗುತ್ತಿದೆ.ಕಾರ್ಯಕ್ರಮದಲ್ಲಿ ಕರ್ತವ್ಯ ಖಾದ್ಯ ಎಂಬ ನೂತನ ಬ್ರಾಂಡ್ ಉದ್ಘಾಟನೆ ಮಾಡಲಾಯಿತು. ವಿವಿಧ ಹಲಸಿನ ಉತ್ಪನ್ನಗಳನ್ನು ಪ್ರದರ್ಶನಕ್ಕೆ ಇಡಲಾಗಿತ್ತು. ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರಮೇಶ್, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಮುಖ್ಯ ಪ್ರಬಂಧಕರಾದ ಮೋಹನ್ ಕುಮಾರ್, ಎನ್‌ಆರ್‌ಎಲ್‌ಎಂ ವಿನೋದ್ ಕುಮಾರ್ ಮಾತನಾಡಿದರು.

ವರದಿಗಳು: ಮಹೇಶ್ ಬಿಡದಿ,
ಹಿರಿಯ ವರದಿಗಾರರು ರಾಮನಗರ
ಪತ್ರಿಕೆ ಪ್ರತಿಗಳು ಮತ್ತು ಜಾಹೀರಾತಿಗಾಗಿ
ಸಂಪರ್ಕಿಸಿ: 99728 34055

# ರಾಮನಗರ ಸುದ್ದಿ ಕಾರ್ನರ್

## ಖಾಸಗಿ ಶಾಲೆಗೆ ಪೈಪೋಟಿ ನೀಡುವ ನಿಟ್ಟಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಬೇಕಿದೆ: ಸಿ.ಪಿ.ಯೋಗೇಶ್ವರ್



ಚನ್ನಪಟ್ಟಣ: ಐತಿಹಾಸಿಕ ಪುಣ್ಯಕ್ಷೇತ್ರವಾಗಿರುವ ಬೇವೂರು ಬೆಟ್ಟದ ತಪ್ಪಲಿನಲ್ಲಿನ ಈ ವಿದ್ಯಾಸಂಸ್ಥೆಗೆ ತನ್ನದೇ ಆದ ಇತಿಹಾಸ ಇದ್ದು, ಈ ವಿದ್ಯಾಸಂಸ್ಥೆಯನ್ನು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಪೈಪೋಟಿ ನೀಡುವ ನಿಟ್ಟಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಎಲ್ಲರೂ ಶ್ರಮಿಸಬೇಕಿದೆ ಎಂದು ಶಾಸಕ ಸಿ.ಪಿ. ಯೋಗೇಶ್ವರ್‌ಅವರು ಅಭಿಪ್ರಾಯಿಸಿದರು.

ತಾಲೂಕಿನ ಬೇವೂರು ಶ್ರೀ ಸಿದ್ದರಾಮೇಶ್ವರ ವಿದ್ಯಾಸಂಸ್ಥೆಯ ಸಮೂಹ ಶಿಕ್ಷಣ ಸಂಸ್ಥೆಗಳ 60 ನೇ ವರ್ಷದ ಸಂಭ್ರಮೋತ್ಸವ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವ ನಿಟ್ಟಿನಲ್ಲಿ ಆರಂಭವಾದ ಈ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಶಾಲೆಗೆ ಶತಮಾನದ ಇತಿಹಾಸ ಇದ್ದು ಈ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡಿದ್ದ ಹಿರಿಯ ವಿದ್ಯಾರ್ಥಿಗಳು ಹಲವು ಉನ್ನತ ಹುದ್ದೆಗಳನ್ನು ಅಲಂಕರಿಸಿ ನಿವೃತ್ತಿ ಆಗಿದ್ದಾರೆ. ಇಂತಹ ವಿದ್ಯಾಸಂಸ್ಥೆಯನ್ನು ಹಂತ ಹಂತವಾಗಿ ಅಭಿವೃದ್ಧಿ ಮಾಡುತ್ತಾ ಪ್ರೌಢಶಾಲೆ ಮತ್ತು ಕಾಲೇಜು ಶಿಕ್ಷಣ ನೀಡುವಲ್ಲಿ ಸಹ 60 ವರ್ಷಗಳನ್ನು ಪೂರೈಸಿರುವ ಈ ವಿದ್ಯಾಸಂಸ್ಥೆ ಪ್ರಸಕ್ತ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಪೈಪೋಟಿ ನೀಡಿ ಗುಣಮಟ್ಟದ ಶಿಕ್ಷಣ ಕೊಡುವಲ್ಲಿ ಶ್ರಮಿಸಬೇಕಿದ್ದು, ಅದಕ್ಕಾಗಿ ಈ ಸಂಸ್ಥೆಯಲ್ಲಿ ವಿದ್ಯೆ ಕಲಿತ ಹಿರಿಯ ವಿದ್ಯಾರ್ಥಿಗಳು ಮತ್ತು ಸಂಸ್ಥೆಯವರು ಶ್ರಮಿಸಬೇಕಿದೆ. ನಮ್ಮ ಭವಿಷ್ಯವನ್ನು ರೂಪಿಸಿರುವ ನಾವು ಶಿಕ್ಷಣ ಪಡೆದ ಶಾಲೆಯ ಅಭಿವೃದ್ಧಿಗೆ ಶ್ರಮಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸಂಸ್ಥೆಯ ಏಳಿಗೆಗೆ ಶ್ರಮಿಸೋಣ ನಾನೂ ಸಹ ಸಂಸ್ಥೆಗೆ ಅಗತ್ಯ ಸೌಲಭ್ಯ ಕಲ್ಪಿಸಿಕೊಡುವಲ್ಲಿ ಕೈ ಜೋಡಿಸುತ್ತೇವೆ ಎಂದು ಭರವಸೆ ನೀಡಿದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಕೆಂಗೇರಿ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಶ್ರೀ ಡಾ. ನಿಶ್ಚಲಾನಂಥನಾಥ ಸ್ವಾಮೀಜಿಗಳು ಆಶೀರ್ವಚನ ನೀಡಿ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೂ ಅಕ್ಷರ ಜ್ಞಾನ ಸಿಗಬೇಕು ಎಂಬ ನಿಟ್ಟಿನಲ್ಲಿ ಲಿಂಗೈಕ್ಯ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿಅವರು ಆರಂಭಿಸಿದ ಅವರ ಕನಸಿನ ಈ ವಿದ್ಯಾಸಂಸ್ಥೆಗೆ 60 ವರ್ಷ ತುಂಬಿದ್ದು, ಸ್ವಾಮೀಜಿಗಳು ಸಮಾಜಕ್ಕೆ ಏನೆಲ್ಲಾ ಕೊಡುಗೆ ನೀಡಬಹುದು ಎಂಬುದಕ್ಕೆ ಸಾಕ್ಷಿಯಾಗಿದೆ. ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಮತ್ತು ಹಿರಿಯ ವಿದ್ಯಾರ್ಥಿಗಳು ಈ ಸಂಸ್ಥೆಯನ್ನು ಮತ್ತಷ್ಟು ಉನ್ನತಿಯಲ್ಲಿ ಕೊಂಡೊಯ್ಯುವ ನಿರೀಕ್ಷೆ ಇದ್ದು, ಅದಕ್ಕೆ ಈ ಅದ್ದೂರಿ ಸಮಾರಂಭವೇ ಸಾಕ್ಷಿಯಾಗಿದೆ ಎಂದು ಬಣ್ಣಿಸಿದರು.

ಬೇವೂರು ಮಠದ ಮೃತ್ಯಂಜಯಶಿವಾಚಾರ್ಯಸ್ವಾಮೀಜಿಗಳು, ಮಾತನಾಡಿ, ವಿದ್ಯಾಸಂಸ್ಥೆಯ ಇತಿಹಾಸದಲ್ಲೇ ಇದು ಮೊಟ್ಟಮೊದಲ ಅದ್ದೂರಿ ಕಾರ್ಯಕ್ರಮವಾಗಿದ್ದು, ವಿದ್ಯಾಸಂಸ್ಥೆಗೆ ಮಕ್ಕಳನ್ನು ಆಕರ್ಷಣೆ ಮಾಡುವ ನಿಟ್ಟಿನಲ್ಲಿ ಇಂತಹ ಮನರಂಜನೆ ಕಾರ್ಯಕ್ರಮಗಳು ಶ್ಲಾಘನೀಯವಾಗಿದ್ದು, ಇದೇ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆ ಗುಣಮಟ್ಟದ ಶಿಕ್ಷಣ ಕೊಡುವಲ್ಲಿ ಶ್ರಮಿಸಲಿ ಎಂದು ತಿಳಿಸಿದರು.

ನಗೆ ಹಬ್ಬ ನಡೆಸಿಕೊಟ್ಟ ಪ್ರಖ್ಯಾತ ವಾಗ್ಮಿಗಳು, ಲೇಖಕರಾದ ಮೈಸೂರಿನ ಪ್ರೊ. ಕೃಷ್ಣೆಗೌಡರು ಮಾತನಾಡಿ, ಇಂದು ಶಿಕ್ಷಣ ಸಂಸ್ಥೆಯ ರಾಜಕೀಯ ಕ್ಷೇತ್ರಕ್ಕೂ ಹೆಚ್ಚು ಸ್ಪರ್ಧಾತ್ಮಕವಾಗಿದ್ದು, ಶಿಕ್ಷಣ ಸಂಸ್ಥೆಯ ಉತ್ತಮ ಫಲಿತಾಂಶಕ್ಕೆ ಯಾವ ಮಟ್ಟಕ್ಕೆ ಬೇಕಾದರೂ ಪೈಪೋಟಿ ನೀಡಲು ಸಿದ್ದವಿರುತ್ತಾರೆ. ಇದೇ ನಿಟ್ಟಿನಲ್ಲಿ ನಿಮ್ಮ ವಿದ್ಯಾಂಸ್ಥೆಯ ಆಡಳಿತ ಮಂಡಳಿ ಸ್ಪರ್ಧಾತ್ಮಕವಾಗಿ ಪೈಪೋಟಿ ನೀಡಿದರೆ ಮಾತ್ರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬಹುದು. ಆದರೆ ಇಲ್ಲಿ ಸಹ ಆಡಳಿತ ಮಂಡಳಿ ಮೌನವಾಗಿದ್ದರೆ ಶಿಕ್ಷಕರು ನಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಸಂಕಲ್ಪ ಮಾಡದಿದ್ದರೆ ಎಷ್ಟು ಹಣ ಖರ್ಚು ಮಾಡಿದರೂ ವಿದ್ಯಾಸಂಸ್ಥೆಯ ಮಕ್ಕಳು ಉತ್ತಮ ಫಲಿತಾಂಸ ಪಡೆಯಲು ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ಆಡಳಿತ ಮಂಡಳಿ ಹಾಗೂ ಶಿಕ್ಷಕರು ಇಂದೇ ಈ ಕಾರ್ಯಕ್ರಮದ ಮೂಲಕ ದೃಢಸಂಕಲ್ಪ ಮಾಡಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ದುಡಿದು ತಿನ್ನುವ ಮನಸ್ಥಿತಿ ಇಲ್ಲ: ಇಂದು ಯುವಕರಿಗೆ ಕೆಲಸ ಇಲ್ಲ ಎಂದು ಹೇಳುತ್ತಾರೆ. ಆದರೆ ಯುವಕರಿಗೆ ಲಕ್ಷಾಂತರ ಕೆಲಸಗಳು ಇವೆ. ಆದರೆ ಯುವಕರಲ್ಲಿ ದುಡಿದು ತಿನ್ನುವ ಮನಸ್ಥಿತಿ ಇಲ್ಲವಾಗಿದೆ. ಇಂದು ಗ್ರಾಮೀಣ ಭಾಗದಲ್ಲಿ ಕೃಷಿಗೆ, ಹೈನೋದ್ಯಮಕ್ಕೆ ಕೆಲಸಗಾರರು ಸಿಗುತ್ತಿಲ್ಲ. ಪೀಣ್ಯದಲ್ಲಿನ ಇಂಡಸ್ಟ್ರಿಯಲ್‌ನಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇವೆ. ನಾನೇ ಸಾವಿರಾರು ಯುವಕರಿಗೆ ಅಲ್ಲಿ ಕೆಲಸ ಕೊಡಿಸುವ ಸಂಪರ್ಕ ಇದೆ. ಆದರೆ ಯಾರೂ ದುಡಿದು ತಿನ್ನುವ ಮನಸ್ಥಿತಿಯಲ್ಲಿ ಇಲ್ಲ. ಅದೇ ರಾಜಕಾರಣದ ಸಭೆ ಸಮಾವೇಶಗಳಿಗೆ ಹಣ, ಹೆಂಡ, ಬಿರಿಯಾನಿ ನೀಡುತ್ತಾರೆ ಎಂದರೆ ಜಿಲ್ಲೆಯಿಂದ ಜಿಲ್ಲೆಗೆ ಹೋಗುತ್ತಾರೆ. ಇಂತಹ ಮನಸ್ಥಿಯಿಂದ ಯುವಕರು ಹೊರಬಂದು ಕಷ್ಟಪಟ್ಟು ದುಡಿಯುವ ಕೌಶಲ್ಯ ತರಬೇತಿಗಳನ್ನು ವಿದ್ಯಾಸಂಸ್ಥೆಯಿಂದ ನೀಡಬೇಕಿದೆ. ಈ ನಿಟ್ಟಿನಲ್ಲಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಮತ್ತು ಅಧ್ಯಾಪಕ ವೃಂದ ಶ್ರಮಿಸಲಿ ಎಂದು ಕೃಷ್ಣೇಗೌಡರು ಸಲಹೆ ನೀಡಿದರು.

ಜನಪ್ರತಿನಿಧಿಗಳು, ಹಿರಿಯ ವಿದ್ಯಾರ್ಥಿಗಳ ಜೊತೆಗೆ ಪೋಷಕರು, ದಾನಿಗಳು ಸಂಪೂರ್ಣ ಸಹಕಾರ ನೀಡಿದರೆ ವಿದ್ಯಾಸಂಸ್ಥೆಗೆ ಹೊಸ ರೂಪವನ್ನು ನೀಡಬಹುದು. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಇರಲಿ ಎಂದು ಮನವಿ ಮಾಡಿದರು.

ಸಮಾರಂಭದಲ್ಲಿ ಗಿಚ್ಚಿಗಿಲಿಗಿಲಿ ಹಾಸ್ಯ ಕಲಾವಿದರಾದ ವಿನೋದ್‌ಗೊಬ್ರಗಾಲ ಮತ್ತು ಕಿರಣ್ ಅವರ ಹಾಸ್ಯ ಕಾರ್ಯಕ್ರಮ ನಗೆಯ ಹೊನಲನ್ನು ತರಿಸಿತ್ತು. ಕಾರ್ಯಕ್ರಮದ ನಿರೂಪಣೆಯನ್ನು ನಿರೂಪಕಿ ವಿದ್ಯಾರವರು ನಡೆಸಿಕೊಡಲಿದ್ದಾರೆ.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ಸತೀಶ್, ಸಮಾಜ ಸೇವಕರಾದ ಪ್ರಭಾಕರ ರೆಡ್ಡಿ ಮತ್ತು ಕೆಪಿಸಿಸಿ ಹಿಂದುಳಿದ ವರ್ಗಗಳ ಉಪಾಧ್ಯಕ್ಷೆ ಪವಿತ್ರಾ ರೆಡ್ಡಿ ಹಾಗೂ ಪುಣ್ಯ ಆಸ್ಪತ್ರೆಯ ವೈದ್ಯ ದಂಪತಿಗಳಾದ ಡಾ.ಹೆಚ್.ಶಿವಪ್ಪ ಮತ್ತು ಡಾ. ಹೆಚ್.ಎಲ್. ಪದ್ಮಾವತಿ ಅವರನ್ನು ವಿದ್ಯಾಸಂಸ್ಥೆಯಿಂದ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಕರುಣ್ ಎಂ.ಎ. ಆನಂದ್, ತೌಟನಹಳ್ಳಿ ಶಿವಲಿಂಗಯ್ಯ, ನಿವೃತ್ತ ಆಯುಕ್ತ ಬೈರನಾಯ್ಕನಹಳ್ಳಿ ರಾಮಚಂದ್ರು, ಅನು, ಚಿಕ್ಕೇಗೌಡ, ವಿದ್ಯಾಸಂಸ್ಥೆಯ ಅಧ್ಯಕ್ಷ ದೊಡ್ಡಮಾದೇಗೌಡ, ಉಪಾಧ್ಯಕ್ಷ ಜಿತೇಂದ್ರ, ಬಿ.ಕೆಂಪೇಗೌಡ, ನವೀನ್‌ಕುಮಾರ್, ಕೆಂಪರಾಜು, ಪ್ರಸಾದ್, ಪ್ರಾಂಶುಪಾಲ ಡಿ.ಸಿ. ಸುರೇಶ್, ಉಪಪ್ರಾಂಶುಪಾಲರಾದ ಗೌರಮ್ಮ, ಮುಖ್ಯಶಿಕ್ಷಕ ಚಿರಾಗ್, ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ಹಳೆ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಇದ್ದರು.

ಕಾರ್ಯಕ್ರಮದ ಕೇಂದ್ರ ಬಿಂಧುವಾಗಿದ್ದ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮಗಳು ಪೋಷಕರು ಮತ್ತು ಗ್ರಾಮಸ್ಥರ ಕಣ್ಮನ ಸೆಳೆದು ತಮ್ಮ ಮಕ್ಕಳ ನೃತ್ಯ ಪ್ರತಿಭೆಯನ್ನು ಕಣ್ತುಂಬಿಕೊಳ್ಳುವ ನಿಟ್ಟಿನಲ್ಲಿ ರಾತ್ರಿ 1 ಗಂಟೆಯಾದರೂ ಪೋಷಕರು ಕೊರೆವ ಚಳಿಯಲ್ಲಿ ಕಾದು ಕುಳಿತಿದ್ದು ವಿಶೇಷವಾಗಿತ್ತು.

## ನಗರಸಭೆಯ ಆಯ–ವ್ಯಯ (ಬಜೆಟ್) : 9ರಂದು ಎರಡನೇ ಪೂರ್ವಭಾವಿ ಸಭೆ

ರಾಮನಗರ: ರಾಮನಗರದ ನಗರಸಭೆಯ 2026–27ನೇ ಸಾಲಿನ ಆಯ–ವ್ಯಯ (ಬಜೆಟ್) ತಯಾರಿಸಲು ಎರಡನೇ ಪೂರ್ವಭಾವಿ ಸಭೆಯನ್ನು ಫೆ.9ರ ಸೋಮವಾರ ಮಧ್ಯಾಹ್ನ 3 ಗಂಟೆಗೆ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ) ಅವರ ಅಧ್ಯಕ್ಷತೆಯಲ್ಲಿ ನಗರಸಭಾ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಈ ಸಭೆಗೆ ನಗರಸಭಾ ಹಾಲಿ/ಮಾಜಿ ಸದಸ್ಯರುಗಳು, ಜನಪ್ರತಿನಿಧಿಗಳು, ಸರ್ಕಾರೇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಹಿರಿಯ ನಾಗರೀಕರು, ಆಡಳಿತ ಪರಿಣಿತರುಗಳು, ಪತ್ರಿಕಾ ಮತ್ತು ದೃಶ್ಯ ಮಾಧ್ಯಮದವರು ಹಾಗೂ ಆಸಕ್ತಿಯುಳ್ಳ ಸಾರ್ವಜನಿಕರು ಆಗಮಿಸಿ ನಗರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸೂಕ್ತ ಸಲಹೆ ಹಾಗೂ ಸೂಚನೆಗಳನ್ನು ನೀಡುವಂತೆ ರಾಮನಗರ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಮಕೂರು ಜಿಲ್ಲೆಯಲ್ಲಿ ಪ್ರಪ್ರಥಮವಾಗಿ ಕಣ್ಣಿನ ಕಾರ್ನಿಯಾ (ಪಾರದರ್ಶಕ ಪಟಲದ) ಯಶಸ್ವಿಯಾಗಿ ಪುನರ್ ಜೋಡಣೆ

ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದಲ್ಲಿ ಅನೇಕಾನೇಕ ಆಧುನಿಕ ತಂತ್ರಜ್ಞಾನಗಳೊಂದಿಗೆ ಶಸ್ತ್ರ ಚಿಕಿತ್ಸೆಗಳನ್ನು ಆರಂಭಗೊಳಿಸಲಾಗಿದೆ. ಈ ನಿಟ್ಟಿನಲ್ಲಿ ಕಾರ್ನಿಯಾ – ಪಾರದರ್ಶಕ ಪಟಲವನ್ನು ಪುನರ್ ಜೋಡಣೆ ಮಾಡಲಾಯಿತು. ಬೆಂಗಳೂರಿನ ಲಯನ್ಸ್ ಕಣ್ಣಿನ ಆಸ್ಪತ್ರೆಯ ಮೂಲಕ ಕಾರ್ನಿಯಾವನ್ನು ಪಾವಗಡಕ್ಕೆ ಸಾಗಿಸಲಾಯಿತು. ಮಧುಗಿರಿ ತಾಲ್ಲೂಕಿನ ಮುದ್ದೇನಹಳ್ಳಿ ಗ್ರಾಮದ ರೈತರೊಬ್ಬರು ದೃಷ್ಟಿದೋಷದಿಂದ ಕಳೆದ ಹಲವಾರು ತಿಂಗಳುಗಳಿಂದ ಬಾಧೆ ಪಡುತ್ತಿದ್ದರು. ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರಕ್ಕೆ ಕಳೆದ ಡಿಸೆಂಬ ನಿಂದ ಇಲ್ಲಿಯ ಹಿರಿಯ ತಜ್ಞರು ಹಾಗೂ ಪಾರದರ್ಶಕ ಪಟಲದ ಪುನರ್ ಜೋಡಣೆಯ ತಜ್ಞರೂ ಆಗಿರುವ ಡಾ.ಅಭಿಷೇಕ್, **MBBS MS (Rank Holder) Fellowship in Cornea (Aravind Eye Hospital, Madurai**) ರವರ ಮಾರ್ಗದರ್ಶನದಲ್ಲಿ ಇಂದು ಪಾರದರ್ಶಕ ಪಟಲದ ಪುನರ್ ಜೋಡಣೆಯಾಯಿತು. ಈ ಅತ್ಯಂತ ಸೂಕ್ಷ್ಮಾತಿಸೂಕ್ಷ್ಮ ಶಸ್ತ್ರ ಚಿಕಿತ್ಸೆಯು ಗ್ರಾಮಾಂತರ ಭಾಗದಲ್ಲಿ ಪ್ರಪ್ರಥಮವಾಗಿ ನೆರವೇರಿಸಲಾಯಿತು. ಈ ಪ್ರಕ್ರಿಯೆಗೆ ಮತ್ತೊಬ್ಬ ಹಿರಿಯ ಶಸ್ತ್ರ ಚಿಕಿತ್ಸಕರಾದ ಶ್ರೀಮತಿ ಡಾ.ಕೀರ್ತಿ ಅಭಿಷೇಕ್, **MBBS, MS Ophthalmology (Gold Medalist)** ರವರು ಸಹಕರಿಸಿದರು. ನಿಜಕ್ಕೂ ಈ ಪ್ರಕ್ರಿಯೆ ಕೈಗೊಳ್ಳುವಂತಹ ಆಸ್ಪತ್ರೆಯು ಸರ್ಕಾರದಿಂದ ಎಲ್ಲ ರೀತಿಯ ಅನುಮತಿ ಪತ್ರವನ್ನು ಪಡೆಯಬೇಕಾಗುತ್ತದೆ. ಇದು ಮನುಷ್ಯನ ಅಂಗಾಂಗ ಕಸಿ ಮಾಡುವಂತಹ ಪ್ರಕ್ರಿಯೆಗೆ ಆಸ್ಪತ್ರೆಯ ಎಲ್ಲ ರೀತಿಯ ದಾಖಲೆಗಳು, ಯಂತ್ರೋಪಕರಣಗಳು ಹಾಗೂ 30 ವರ್ಷಗಳ ಅನುಭವವನ್ನು ಹೊಂದಿರುವ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆಗೆ ಮತ್ತೊಂದು ಮಹಾನ್ ಹೆಗ್ಗುರುತು. ಬೆಂಗಳೂರಿನಂತಹ ಮಹಾನಗರಗಳಲ್ಲಿ ಈ ರೀತಿಯ ಪಾರದರ್ಶಕ ಪಟಲದ ಪುನರ್ ಜೋಡಣೆ ದಾನಿಗಳಿಂದ ಪಡೆದ ಕಾರ್ನಿಯಾವನ್ನು ಅತ್ಯಂತ ವಿಶೇಷವಾದ ರೀತಿಯಲ್ಲಿ ಅಂದರೆ ಉಷ್ಣಾಂಶವನ್ನು 5 ಡಿಗ್ರಿ ಯಿಂದ 8 ಡಿಗ್ರಿ ಯವರೆಗೆ ಇರುವಂತೆ ಕಾಪಾಡಿಕೊಂಡು ಪಾವಗಡಕ್ಕೆ ತರಲಾಯಿತು. ಇದೀಗ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆಯಲ್ಲಿ ಪಾರದರ್ಶಕ ಪಟಲವನ್ನು ಮತ್ತೊಬ್ಬ ರೋಗಿಗೆ ಪುನರ್ ಜೋಡಣೆ ಮಾಡಲಾಯಿತು. ಶ್ರೀ ಶಾರದಾದೇವಿಯವರ ಆಶೀರ್ವಾದದಿಂದ ಹಾಗೂ ಸಂಸ್ಥೆಯ ಹಿರಿಯ ತಜ್ಞರುಗಳ ಸಹಕಾರದಿಂದ ಅತ್ಯಂತ ಫಲಪ್ರದಾಯಕವಾಗಿ ಈ ಸೂಕ್ಷ್ಮಾತಿಸೂಕ್ಷ್ಮವಾದ ಶಸ್ತ್ರ ಚಿಕಿತ್ಸೆ ಯಶಸ್ವಿಯಾಯಿತು ಎಂದು ಪೂಜ್ಯ ಶ್ರೀಮತ್ ಸ್ವಾಮಿ ಜಪಾನಂದಜೀ ಮಹಾರಾಜ್ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಈ ಸೂಕ್ಷ್ಮಾತಿಸೂಕ್ಷ್ಮ ಶಸ್ತ್ರ ಚಿಕಿತ್ಸೆಯು ಸರಿಸುಮಾರು ಎರಡೂವರೆ ಗಂಟೆ ಹಿಡಿಯಿತು. ಭಗವಂತನ ಕೃಪೆಯಿಂದ ಇಂದು (6–2–2026) ರೋಗಿಯು ಸಂಪೂರ್ಣ ಗುಣಮುಖನಾಗಿ ಸಂಪೂರ್ಣ ದೃಷ್ಟಿಯು ಬಂದಿರುತ್ತದೆ. ರೈತಾಪಿ ವ್ಯಕ್ತಿಯಾದುದರಿಂದ ತಾನು ತನ್ನ ಕೃಷಿ ಚಟುವಟಿಕೆಗಳಲ್ಲಿ ತೊಡಗುತ್ತೇನೆಂದು ಅತ್ಯಂತ ಸಂತೋಷದಿಂದ ಪೂಜ್ಯ ಸ್ವಾಮೀಜಿಯವರಿಗೆ ತಿಳಿಸಿದನು.

ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಮೂಲಕ ಸಹಸ್ರಾರು ಜನರಿಗೆ ಅದರಲ್ಲಿಯೂ ಗ್ರಾಮಾಂತರ ಭಾಗದಿಂದ ಬರುವ ಜನರಿಗೆ ಮಹಾನಗರಗಳಲ್ಲಿ ದೊರೆಯುವಂತಹ ಕಣ್ಣಿಗೆ ಸಂಬಂಧಪಟ್ಟ ಎಲ್ಲ ರೀತಿಯ ಶಸ್ತ್ರ ಚಿಕಿತ್ಸೆ ಹಾಗೂ ಔಷಧೋಪಚಾರಗಳು ದೊರೆಯುವಂತಾಗಿಸಿರುವುದು ನಿಜಕ್ಕೂ ಒಂದು ಮಹಾನ್ ಕಾರ್ಯವೇ ಸರಿ. ಇದರೊಂದಿಗೆ ಗ್ರಾಮಾಂತರದಿಂದ ಬರುವ ರೋಗಿಗಳಿಗೆ ಸಹಸ್ರ ಸಹಸ್ರ ಹಣವನ್ನು ವ್ಯಯ ಮಾಡುವ ಬದಲು ಅತ್ಯಂತ ಸುಲಭದಲ್ಲಿ ಉತ್ಕೃಷ್ಟ ಮಟ್ಟದ ಶಸ್ತ್ರ ಚಿಕಿತ್ಸೆ ಹಾಗೂ ಔಷಧೋಪಚಾರ ದೊರೆಯುತ್ತಿರುವುದು ಅದರಲ್ಲಿಯೂ ಗ್ರಾಮಾಂತರ ವಿಭಾಗದಲ್ಲಿ ಇದೊಂದು ಮಹತ್ತರವಾದ ಮೈಲುಗಲ್ಲೇ ಸರಿ. ಈವರೆವಿಗೆ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಮೂಲಕ 492888 ಜನರಿಗೆ ನೇತ್ರ ತಪಾಸಣೆ ನಡೆಸಲಾಗಿದೆ. ಇದರಲ್ಲಿ ಸಂಚಾರಿ ಕಣ್ಣಿನ ಆಸ್ಪತ್ರೆಯ ಮೂಲಕ 131817 ಜನರಿಗೆ ನೇತ್ರ ತಪಾಸಣೆ ನಡೆಸಲಾಗಿದೆ. ಶಾಲಾ ಹಾಗೂ ವಿದ್ಯಾ ಸಂಸ್ಥೆಗಳ ಸುಮಾರು 126694 ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ನೇತ್ರ ತಪಾಸಣೆ ನಡೆಸಲಾಗಿದೆ. ಇದರಲ್ಲಿ ದೃಷ್ಟಿದೋಷವುಳ್ಳ 768 ಮಕ್ಕಳಿಗೆ ಉಚಿತವಾಗಿ ಕನ್ನಡಕಗಳನ್ನು ನೀಡಲಾಗಿದೆ. ಮತ್ತೊಂದು ಅತ್ಯಂತ ಅದ್ಭುತವಾದ ಮೈಲುಗಲ್ಲೆಂದರೆ ಗ್ರಾಮಾಂತರ ಭಾಗದಲ್ಲಿಯೇ ಪ್ರಪ್ರಥಮವಾಗಿ ಮೂರು ತಿಂಗಳ ಹಸುಗೂಸಿನಿಂದ ಹಿಡಿದು 10 ವರ್ಷದವರೆಗಿನ 146



ಮಕ್ಕಳಿಗೆ ಸಂಪೂರ್ಣ ಉಚಿತವಾಗಿ ನೇತ್ರ ಶಸ್ತ್ರ ಚಿಕಿತ್ಸೆಯನ್ನು ನಡೆಸಿರುವುದು ಒಂದು ದಾಖಲೆ ಎನ್ನಬಹುದು. ಇದೇ ಸಂದರ್ಭದಲ್ಲಿ ಸದರಿ ಆಸ್ಪತ್ರೆಯ ಮೂಲಕ ಈವರೆವಿಗೆ 51000 ನೇತ್ರಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗಿದೆ. ಈ ಯೋಜನೆಯು ನಾಡಿನ ಹೆಸರಾಂತ ಮಕ್ಕಳ ನೇತ್ರತಜ್ಞರಾದ ಡಾ. ವಸುಧಾ ನರೇಶ್, ಒಃಃಖ ಒಖ ಈಒಖಈ ಒಕಇಊ ಗಿಏ ರವರು ಶಸ್ತ್ರ ಚಿಕಿತ್ಸೆಗಳನ್ನು ನಡೆಸಿರುತ್ತಾರೆ. ಈಗಲೂ ಸಹ ತಿಂಗಳಿಗೊಮ್ಮೆ ಕೇವಲ ಪುಟಾಣಿ ಮಕ್ಕಳಿಗೆ, ಹಸುಗೂಸುಗಳಿಗೆ ಹಾಗೂ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪೂರ್ಣಪ್ರಮಾಣದ ನೇತ್ರ ತಪಾಸಣಾ ಶಿಬಿರವನ್ನು ಸಂಪೂರ್ಣ ಉಚಿತವಾಗಿ ನಡೆಸುತ್ತಿರುವುದನ್ನು ಇಲ್ಲಿ ಉಲ್ಲೇಖಿಸಬಹುದಾಗಿದೆ. ಈ ತಜ್ಞರ ತಂಡದಲ್ಲಿ ಡಾ.ಚಂದ್ರಕಲಾ ಜಿ.ಆರ್., ಒಃಃಖ ಆಐಔ ಆಓಃ, ಇಓಖ, ಮುಖ್ಯ ವೈದ್ಯಾಧಿಕಾರಿಗಳು, ಸ್ವಾಮಿ ವಿವೇಕಾನಂದ ಸಂಘಟಿತ ಗ್ರಾಮಾಂತರ ಆರೋಗ್ಯ ಕೇಂದ್ರ ಹಾಗೂ ಡಾ.ಸ್ವಾತಿ ವಿ, ಒಃಃಖ ಆಔಓಖ ಆಓಃ ಔಿಣಿಚಿಟ, ರವರೂ ಸಹ ಈ ಯೋಜನೆಯಲ್ಲಿ ತಮ್ಮ ಅತ್ಯಮೂಲ್ಯ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಪುಟ್ಟ ಮಕ್ಕಳ ಮೆಳ್ಳಗಣ್ಣು, ಸಣ್ಣ ಪ್ರಮಾಣದ ದೃಷ್ಟಿದೋಷ ಇತ್ಯಾದಿಗಳನ್ನು ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದಲ್ಲಿ ನಿರಂತರವಾಗಿ ನಡೆಸುತ್ತಾ ಬರುತ್ತಿರುವುದನ್ನು ತಾಯಿ ಶಾರದೆಯ ಕೃಪಾಶೀರ್ವಾದವೇ ಕಾರಣ ಎಂದು ಭಾವುಕರಾಗಿ ಪೂಜ್ಯ ಸ್ವಾಮೀಜಿಯವರು ವಿವರಿಸಿರುತ್ತಾರೆ.

ಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಮಕ್ಕಳ ನೇತ್ರ ಪರೀಕ್ಷೆ ಹಾಗೂ ಚಿಕಿತ್ಸೆ ನಡೆಸಬೇಕಾಗುತ್ತದೆ. ಕಾರಣ, ಒಂದು ವರ್ಷದ ಮಕ್ಕಳಿಗೆ ಮೊಬೈಲ್ ನೀಡುತ್ತಿರುವ ಪೋಷಕರಿಂದ ಈ ನೇತ್ರಕ್ಕೆ ಸಂಬಂಧಪಟ್ಟ ನ್ಯೂನತೆಗಳು ದಿನೇ ದಿನೆ ಹೆಚ್ಚಾಗುತ್ತಿದ್ದು, ಇತ್ತೀಚಿನ ವೈಜ್ಞಾನಿಕ ವರದಿಯ ಪ್ರಕಾರ ಮಕ್ಕಳು ಪ್ರೌಢಾವಸ್ಥೆಗೆ ಬರುವ ಮುನ್ನವೇ



ತೀವ್ರತರವಾದ ದೃಷ್ಟಿದೋಷಗಳಿಗೆ ಒಳಗಾಗುತ್ತಿರುವುದು ಕಂಡು ಬರುತ್ತಿದೆ. ಪೂಜ್ಯ ಸ್ವಾಮಿ ಜಪಾನಂದಜೀ ಮಹಾರಾಜ್ ರವರ ಪ್ರಕಾರ ಪೋಷಕರ ಬೇಜವಾಬ್ದಾರಿತನ ಹಾಗೂ ಹೆಚ್ಚು ಸಮಯ ಮೊಬೈಲ್ ಮತ್ತು ಟಿ.ವಿ. ಪರದೆಗಳ ಮುಂದೆ ಮಕ್ಕಳನ್ನು ಬಿಡುವ ಸಂದರ್ಭ ಹೆಚ್ಚಾಗುತ್ತಿದ್ದು ಇತ್ತೀಚೆಗೆ ಹಸುಗೂಸು ಸಹ ಮೊಬೈಲ್ ಚಾಳಿಗೆ ಸಿಲುಕಿ ತಾನು ದೃಷ್ಟಿದೋಷದಿಂದ ಬಳಲುತ್ತಿರುವುದನ್ನು ಕಾಣುತ್ತಿದ್ದೇವೆ. ದಯಮಾಡಿ ಪೋಷಕರು ಮುಖ್ಯವಾಗಿ ತಮ್ಮ ಮಕ್ಕಳಿಗೆ ಮೊಬೈಲಿನ ಗೀಳನ್ನು ಬಿಡಿಸಬೇಕಾಗಿ ಕೋರಲಾಗಿದೆ. ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆಯಲ್ಲಿ ಆಧುನಿಕ ತಂತ್ರಜ್ಞಾನ ಹಾಗೂ ಕಂಪ್ಯೂಟರ್ ಆಧಾರಿತ ಕೋಟ್ಯಂತರ ರೂಪಾಯಿಗಳ ಪರೀಕ್ಷಾ ಯಂತ್ರಗಳು ಲಭ್ಯವಿರುವುದರಿಂದ ತಕ್ಷಣ ಮಕ್ಕಳ ನೇತ್ರದ ನ್ಯೂನತೆಗಳನ್ನು ಕಂಡುಹಿಡಿಯಬಹುದಾಗಿದೆ. ಸಾರ್ವಜನಿಕರು ಈ ಸೌಲಭ್ಯವನ್ನು ಉಪಯೋಗಿಸಿಕೊಂಡು ದೃಢ ರಾಷ್ಟ್ರವನ್ನು ನಿರ್ಮಿಸಲು ಕೈಜೋಡಿಸಬೇಕಾಗಿದೆ ಎಂದು ಪೂಜ್ಯ ಸ್ವಾಮಿ ಜಪಾನಂದಜೀ ರವರು ಮನವಿ ಮಾಡಿರುತ್ತಾರೆ.

# ಅದ್ದೂರಿ ಜರುಗಿದ ಸ್ಟೆಲ್ಲಾ ಮೇರಿಸ್ ಶಾಲೆಯ ಆರಂಭ–2ಕೆ26 ವಾರ್ಷಿಕೋತ್ಸವ

ವರದಿ ಗುಬ್ಬಿ ಭರತ್

ಗುಬ್ಬಿ: ಶೈಕ್ಷಣಿಕ ಸೇವೆಯಲ್ಲಿ ರಜತ ಮಹೋತ್ಸವ ಆಚರಿಸಿಕೊಂಡು ತಾಲ್ಲೂಕಿನಲ್ಲಿ ಪ್ರತಿಷ್ಠಿತ ಶಾಲೆಗಳ ಪೈಕಿ ಉತ್ತಮ ಶಾಲೆಯಾಗಿರುವ ಸ್ಟೆಲ್ಲಾ ಮೇರಿಸ್ ವಾರ್ಷಿಕೋತ್ಸವ ಸಮಾರಂಭವನ್ನು ಆರಂಭ–2ಕೆ26 ಹೆಸರಿನಲ್ಲಿ ಅದ್ದೂರಿಯಾಗಿ ನಡೆಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಗೊಲ್ಲಹಳ್ಳಿ ಮಠದ ಶ್ರೀ ವಿಭವ ವಿದ್ಯಾಶಂಕರ ಸ್ವಾಮೀಜಿ ಮಾತನಾಡಿ ಸಂಸ್ಕಾರವಿಲ್ಲದ ಶಿಕ್ಷಣ ದೇಶಕ್ಕೆ ಮಾರಕ. ದೇಶದ್ರೋಹ ಕೆಲಸ, ಮೋಸ, ಭ್ರಷ್ಟಾಚಾರ ಎಲ್ಲವೂ ವಿದ್ಯಾವಂತರಿಂದ ನಡೆದಿದೆ ಎಂಬುದು ವಿಷಾದನೀಯ. ಅದರಲ್ಲೂ ಸಂಸ್ಕಾರರಹಿತ ಶಿಕ್ಷಣ ಪಡೆದವರಲ್ಲಿ ಸಮಾಜಘಾತುಕ ಶಕ್ತಿಗಳು ಕಾಣುತ್ತಿವೆ ಎಂದ ವಿಷಾದಿಸಿದ ಅವರು ವೃದ್ಧಾಶ್ರಮ, ಅನಾಥಾಶ್ರಮ ಹೆಚ್ಚಾಗಲು ಈ ಸಂಸ್ಕಾರವಿಲ್ಲದ ವಿದ್ಯೆ ಕಾರಣ. ಈ ನಿಟ್ಟಿನಲ್ಲಿ ಸಂಸ್ಕಾರ ಕೊರತೆ ನೀಗಿಸಲು ಶಾಲೆಯಲ್ಲಿ ಎಲ್ಲಾ ರಂಗದ ಚಟುವಟಿಕೆ ರೂಢಿಸಿ ಮಕ್ಕಳಿಗೆ ನೈತಿಕ, ಸಾಮಾಜಿಕ ಮೌಲ್ಯ ತಿಳಿಸಬೇಕಿದೆ ಎಂದರು.



ಕ್ಷೇತ್ರ ಶಿಕ್ಷಣಾಧಿಕಾರಿ ನಟರಾಜ್ ಮಾತನಾಡಿ ಶೈಕ್ಷಣಿಕ ಪ್ರಗತಿ ಹೆಚ್ಚಿಸಿಕೊಳ್ಳಲು ಸರ್ಕಾರ ಜೊತೆ ಕೈ ಜೋಡಿಸಿದ ಖಾಸಗಿ ಶಾಲೆಗಳು ಉತ್ತಮ ಫಲಿತಾಂಶ ಸಹ ನೀಡುತ್ತಿವೆ. ಕೇವಲ ಬೌದ್ಧಿಕವಾಗಿ ಗಮನಹರಿಸಿದೇ ಸರ್ವತೋಮುಖ ಬೆಳವಣಿಗೆಗೆ ಎಲ್ಲಾ ಚಟುವಟಿಕೆ ಮಾಡಬೇಕು. ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ತಂದ ಶಾಲೆಗಳ ಪೈಕಿ ಸ್ಟೆಲ್ಲಾ ಮೇರಿಸ್ ಕೂಡಾ ಒಂದು. ಸಾರ್ವಜನಿಕ ಶಿಕ್ಷಣ ಇಲಾಖೆಯ ಸೌಲಭ್ಯ ಎಲ್ಲಾ ಶಾಲೆಗೆ ತಲುಪುವ ಮುನ್ನ ಖಾಸಗಿ ಶಾಲೆಗಳು ಅಂಕ ಗಳಿಕೆಗೆ ಮಾನ್ಯತೆ ನೀಡುತ್ತಿವೆ. ಎಲ್ಲಾ ಶಾಲೆಗಳು ಅಂಕ ಹೊರತಾದ ದೈಹಿಕ, ನೈತಿಕವಾಗಿ ಶಿಕ್ಷಣ ನೀಡಿ ಎಂದು ಕರೆ ನೀಡಿದರು. ಸಂಪನ್ಮೂಲ ವ್ಯಕ್ತಿ ರೇವಣಸಿದ್ದಪ್ಪ ಮಾತನಾಡಿ ಪೋಷಕರು ತಮ್ಮ ಮಕ್ಕಳನ್ನು ಸೇರಿಸುವ ಶಾಲೆಯ ಹಿನ್ನಲೆ ತಿಳಿದುಕೊಳ್ಳುತ್ತಾರೆ. ಅಂತಹ ಶಾಲೆಗಳು ಶಿಕ್ಷಕ ವೃತ್ತಿ ಹಿನ್ನಲೆಯಲ್ಲಿ ನಡೆದಿದ್ದರೆ ಉತ್ತಮ ಫಲಿತಾಂಶದ ಶಾಲೆ ಎನಿಸುತ್ತದೆ. ಈ ಮಾದರಿಯಲ್ಲಿ ಸ್ಟೆಲ್ಲಾ ಮೇರಿಸ್ ಶಾಲೆ ನಡೆದಿದೆ. ಉಪನ್ಯಾಸಕ ಅಶ್ವಕ್ ಅಹ್ಮದ್ ಮಾರ್ಗದರ್ಶನದ ಈ ಶಾಲೆ ಮತ್ತಷ್ಟು ಹೆಸರುಗಳಿಸಲಿ ಎಂದು ಆಶಿಸಿದರು. ಇದೇ ಸಂದರ್ಭದಲ್ಲಿ ಎಸ್ಎಸ್ಎಲ್ಸಿ ಹೆಚ್ಚು ಅಂಕ ಗಳಿಸಿದ ಶಾಲಾ ಮಕ್ಕಳಿಗೆ ಹಾಗೂ ವಿವಿಧ ಚಟುವಟಿಕೆಯಲ್ಲಿ ಗೆಲುವು ಸಾಧಿಸಿದ ಮಕ್ಕಳಿಗೆ ಹಾಗೂ ಪೋಷಕರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಪಪಂ ಮಾಜಿ ಸದಸ್ಯರಾದ ಸಿ.ಮೋಹನ್, ಕುಮಾರ್, ಸ್ಟೆಲ್ಲಾ ಮೇರಿಸ್ ಸಂಸ್ಥೆಯ ಮುಖ್ಯಸ್ಥ ಮುಷ್ತಾಕ್ ಅಹಮ್ಮದ್, ಉಪನ್ಯಾಸಕ ಆಶ್ವಕ್ ಅಹಮದ್, ಮರಿಯಾಂಬಿ ಸೇರಿದಂತೆ ಶಾಲೆಯ ಎಲ್ಲಾ ಸಿಬ್ಬಂದಿ ಇದ್ದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಹೋರಾಟ ಬೇಕಿರುವುದು ಬದುಕಲೇ ಹೊರತು ಸಾಯಲು ಅಲ್ಲ....ಮಾನಸಿಕ ದೃಢತೆಯನ್ನು ಕಾಪಾಡುವುದು ಹೇಗೆ..

ಇತ್ತೀಚಿನ ವರ್ಷಗಳಲ್ಲಿ ಅನೇಕ ವ್ಯಕ್ತಿಗಳು ತುಂಬಾ ಕಷ್ಟಪಟ್ಟು ಮೇಲೆ ಬಂದು, ಒಂದು ಬೃಹತ್ ಆರ್ಥಿಕ ಸಾಮ್ರಾಜ್ಯವನ್ನು ಸ್ಥಾಪಿಸಿಕೊಂಡು, ತದನಂತರ ಯಾವುದೋ ಒತ್ತಡಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಘಟನೆಗಳು ಹೆಚ್ಚಾಗುತ್ತಿವೆ.

ಪ್ರೇಮಿಗಳು, ವಿದ್ಯಾರ್ಥಿಗಳು, ಅನೈತಿಕ ಸಂಬಂಧಗಳು, ಮಾನಸಿಕ ಅಸ್ವಸ್ಥರು, ಸಾಲಗಾರರು, ಕೆಲವು ರೈತರು, ಕೌಟುಂಬಿಕ ಸಮಸ್ಯೆಗಳನ್ನು ಎದುರಿಸುತ್ತಿರುವವರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದರ ಜೊತೆಗೆ ಈ ರೀತಿ ಬೃಹತ್ ಸಾಮ್ರಾಜ್ಯದ ವ್ಯಕ್ತಿಗಳು ಸಹ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ.

ಹೌದು, ಇಂದಿನ ಆಧುನಿಕ ಸಂಕೀರ್ಣ ವ್ಯವಸ್ಥೆಯಲ್ಲಿ ಎಲ್ಲರಿಗೂ ಒತ್ತಡ, ಅಸಮಾಧಾನ ಇರುತ್ತದೆ, ಇದ್ದೇ ಇರುತ್ತದೆ. ಈ ಆಧುನಿಕ ಬದುಕಿನಲ್ಲಿ ಆರೋಗ್ಯ ಸಮಸ್ಯೆ ಹೊರತುಪಡಿಸಿ ಮತ್ತೆ ಯಾವುದೇ ಒತ್ತಡವನ್ನು ಸಹಿಸಿಕೊಳ್ಳಲೇಬೇಕಾಗುತ್ತದೆ. ಅದರಲ್ಲೂ ಏನನ್ನಾದರೂ ಸಾಧಿಸುವುಮಹಾತ್ವಾಕಾಂಕ್ಷಿ ಇರುವವರಿಗೆ ಒತ್ತಡ ಅತ್ಯಂತ ಸಹಜವಾದದ್ದು.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ದತ್ತಾತ್ರೇಯ ರಾಮಚಂದ್ರ ಬೇಂದ್ರೆ ಅವರ ಕವನದ ಎರಡು ಸಾಲುಗಳು ಇಲ್ಲಿ ಉಲ್ಲೇಖನೀಯ,

* ನಿದ್ದೆಗೊಮ್ಮೆ ನಿತ್ಯ ಮರಣ, ಎದ್ದ ಸಲಾ ನವೀನ ಜನನ * ಅಂದರೆ ಪ್ರತಿ ಬೆಳಗು ನಮಗೆ ಹೊಸ ಬದುಕು ನೀಡಿದಂತೆ. ಹಿಂದಿನ ದಿನದ ಎಲ್ಲಾ ಸಾಧನೆಗಳು, ವಿಫಲತೆಗಳು ಅಲ್ಲೇ ಮರೆತು ಮುನ್ನಡೆಯಬೇಕು, ವ್ಯಾವಹಾರಿಕತೆಯ ವಾಸ್ತವತೆಯನ್ನು ಜೊತೆಯಲ್ಲಿ ಮೈಗೂಡಿಸಿಕೊಂಡು.

ರಾಷ್ಟ್ರಕವಿ ಕುವೆಂಪು ಅವರ ಮತ್ತೊಂದು ಮಾತು * ಬದುಕಿನ ಬಹುದೊಡ್ಡ ಸಾಧನೆ ಎಂದರೆ ಬದುಕುವುದು ಮಾತ್ರ* ಇದನ್ನು ನೆನಪು ಮಾಡಿಕೊಳ್ಳುತ್ತಾ.....

ಸಾಮಾನ್ಯವಾಗಿ ಸಹಜ ವ್ಯಕ್ತಿಗಳಿಗೆ ಇದು ಅಷ್ಟೊಂದು ಅನ್ವಯಿಸುವುದಿಲ್ಲ. ವಿಶೇಷವಾಗಿ ಸಮಾಜದಲ್ಲಿ, ಸಾರ್ವಜನಿಕವಾಗಿ ಗುರುತಿಸಿಕೊಂಡಿರುವವರಿಗೆ ಇದೊಂದು ಬಹುದೊಡ್ಡ ಸವಾಲನ್ನು ಒಡ್ಡುತ್ತದೆ. ಅಂತಹ ಸಂದರ್ಭದಲ್ಲಿ ನಾವು ಮಾಡಬೇಕಾಗಿರುವುದು ತುಂಬಾ ತುಂಬಾ ಇದೆ. ಒಂದು ವೇಳೆ ಈ ರೀತಿಯ ಪರಿಸ್ಥಿತಿ ನಮಗೆ ಎದುರಾದಾಗ ನಾವು ಮಾಡಬೇಕಾಗಿರುವ ಕೆಲಸ ನಮ್ಮ ನಿಷ್ಠೆಯನ್ನು ಪ್ರಕೃತಿಗೆ ವರ್ಗಾಯಿಸಿ ಮತ್ತೆ ನಾವು ಶೂನ್ಯದಿಂದಲೇ ಬದುಕು ಪ್ರಾರಂಭಿಸಬೇಕು. ಅಂದರೆ ಪ್ರಸ್ತುತ ಎಲ್ಲಿರುತ್ತವೆಯೋ, ಜೈಲೋ, ಅವಮಾನವೋ ಏನೇ ಆಗಲಿ ಅಲ್ಲಿಂದಲೇ ಮುಂದಿನ ಹೊಸ ಬದುಕನ್ನು ಪ್ರಾರಂಭಿಸಬೇಕು.

ಇಲ್ಲಿ ನಮಗೆ ತುಂಬಾ ಕಡಿಮೆ ಆಯ್ಕೆಗಳಿರುತ್ತವೆ. ಒಂದು ವೇಳೆ ನಮ್ಮ ಕುಟುಂಬದವರು, ರಕ್ತ ಸಂಬಂಧಿಗಳು, ಹಿತೈಷಿಗಳು, ಆತ್ಮೀಯರಲ್ಲಿ ಯಾರಾದರೂ ನಮ್ಮ ತಪ್ಪುಗಳನ್ನು ಮನ್ನಿಸಿಯೋ, ಕಷ್ಟವನ್ನು ಸಹಿಸಿಯೋ ನಮಗೆ ಪ್ರಜ್ಞಾಪೂರ್ವಕವಾಗಿ, ಆತ್ಮೀಯವಾಗಿ, ಯಾವುದೇ ಮುಖವಾಡವಿಲ್ಲದೆ ಸಹಾಯ ಏನಾದರೂ ಮಾಡುವುದಾದರೆ ಪಡೆಯಬಹುದು. ಇಲ್ಲದೇ ಅವರೇನಾದರೂ ನಮ್ಮನ್ನು ಹಿಂದೆ ಹೊಗಳುತ್ತಿದ್ದ ಕಾರಣಗಳನ್ನು ಮುಂದಿಟ್ಟುಕೊಂಡು ಈಗ ಈ ವಿಫಲತೆಯನ್ನೇ ಹಿಯಾಳಿಸಿ ನಮ್ಮನ್ನು ತೀರಾ ನಿಕೃಷ್ಟವಾಗಿ ಕಾಣುತ್ತಿದ್ದರೆ, ಮೊದಲಿಗೆ ಇನ್ನೆಂದೂ ಅವರು ನಮ್ಮ ಜೀವನದಲ್ಲಿ ಇರುವುದಿಲ್ಲ, ಅವರಿಗೆ ನಮ್ಮಲ್ಲಿ ಯಾವುದೇ ಪಾತ್ರವಿಲ್ಲ ಎಂದು ಭಾವಿಸಿ ಅವರಿಂದ ನೇರವಾಗಿ ದೂರ ಸರಿಯಬೇಕು. ನಮ್ಮ ಪಾಲಿಗೆ ಅವರಿಲ್ಲ, ಅವರ ಪಾಲಿಗೆ ನಾವು ಸತ್ತಿದ್ದೇವೆ ಎಂದೇ ಭಾವಿಸಿಕೊಳ್ಳಬೇಕು.

ಏಕೆಂದರೆ ಕುಟುಂಬದವರ ಕರ್ಕಶ ನುಡಿಗಳನ್ನು ಕೇಳುವುದು ತುಂಬಾ ಕಷ್ಟ. ಅದು ಗಂಡ ಹೆಂಡತಿಯೇ ಆಗಿರಲಿ, ಮಕ್ಕಳೇ ಆಗಿರಲಿ, ತಂದೆ ತಾಯಿಯೇ ಯಾರೇ ಆಗಿರಲಿ ನಮ್ಮನ್ನು ಆತ್ಮೀಯವಾಗಿ ಆಲಂಗಿಸಿಕೊಂಡಾಗ ಮಾತ್ರ ನಾವು ಅವರೊಂದಿಗೆ ಇರಬೇಕು. ಇಲ್ಲದಿದ್ದರೆ ಆ ಸಂಬಂಧಗಳನ್ನು ನಿರ್ಲಕ್ಷಿಸಬೇಕಾಗುತ್ತದೆ. ಆ ಚುಚ್ಚು ಮಾತುಗಳನ್ನು ಸಹಿಸಿಕೊಳ್ಳಬಾರದು.

ಹಾಗೆಯೇ ಅತ್ಯಂತ ಮುಖ್ಯವಾಗಿ ನಾನೊಬ್ಬ ಅನಾಥ ಎನ್ನುವ ಪ್ರಜ್ಞೆಯನ್ನು ಬೆಳೆಸಿಕೊಳ್ಳಬೇಕಾಗುತ್ತದೆ. ಅಂದರೆ ನನಗಾಗಿ ಯಾರು ಇಲ್ಲ. ನಾನು ಒಬ್ಬಂಟಿ. ನನಗೆ ಮಾನ ಅವಮಾನವೂ ಇಲ್ಲ, ಸಂಬಂಧಗಳೂ ಇಲ್ಲ. ಈ ಪ್ರಕೃತಿ ನೀಡಿರುವ ಜೀವ ತಾನಾಗಿ ತಾನೇ ಜೀವ ಹಿಂದಿರುಗಿ ತೆಗೆದುಕೊಳ್ಳುವವರೆಗೂ ನಾನು ಬದುಕಲು ಹೋರಾಡುತ್ತಲೇ ಇರುತ್ತೇನೆ.

ನನ್ನ ಕೆಲವು ನಿರ್ಧಾರಗಳು ತಪ್ಪೋ, ಸರಿಯೋ ನನ್ನ ಅರಿವಿನಿಂದ ಮಾಡಿದ್ದೇನೆ. ಕೆಲವು ಆಕಸ್ಮಿಕವೂ ಇರಬಹುದು, ಕೆಲವು ಉದ್ದೇಶಪೂರ್ವಕವಾಗಿಯೇ ಇರಬಹುದು. ಅದಕ್ಕಾಗಿ ಪಶ್ಚಾತಾಪ ಪಡುತ್ತಾ, ನನ್ನನ್ನು ನಾನು ತಿದ್ದಿಕೊಳ್ಳುತ್ತಾ ಬದುಕುತ್ತಲೇ ಇರುತ್ತೇನೆ. ನಮ್ಮ ನಮ್ಮ ವಯಸ್ಸು ಮತ್ತು ಅನುಭವದಲ್ಲಿ ಈ ಭಾರತೀಯ ಸಮಾಜವನ್ನು ಅರ್ಥಮಾಡಿಕೊಂಡಿರುವ ಮಟ್ಟಿಗೆ ಹೇಳುವುದಾದರೆ ಬಹುತೇಕ ಯಾರದೇ ಜೀವನವಿರಲಿ ಅದರಲ್ಲಿ ಸಂಪೂರ್ಣ ಸುಖ ಸಂತೋಷಗಳೇ ತುಂಬಿ ತುಳುಕುತ್ತದೆ ಎಂಬುದು ನಂಬಲಾಸಾಧ್ಯ.

ಕಷ್ಟ ಸುಖಗಳನ್ನು ಅಳೆಯುವ ಯಾವುದೇ ಮಾಪನ ಇಲ್ಲ ನಿಜ. ಆದರೆ ಅಧಿಕಾರ, ಹಣ, ಆಸ್ತಿ, ಕೌಟುಂಬಿಕ ಪರಿಸರ, ಆರೋಗ್ಯ, ವಾಸಿಸುವ ಸ್ಥಳ, ಉದ್ಯೋಗ ಮುಂತಾದ ಕೆಲವು ಮಾನದಂಡಗಳನ್ನು ಮೇಲ್ನೋಟಕ್ಕೆ ಗಮನಿಸಿದಾಗ ಕೆಲವರು ಹೆಚ್ಚು ಯಶಸ್ವಿ ಎಂತಲೂ ಮತ್ತು ಮೇಲೆ ಹೇಳಿದ ವಿಷಯಗಳು ಸರಿಯಾಗಿ ದೊರೆಯದೆ ಮೂಲಭೂತ ಅವಶ್ಯಕತೆಗಳಿಗೇ ತಮ್ಮ ಜೀವನವನ್ನು ಸವೆಸುತ್ತಿರುವ ಜನರನ್ನು ಬಡವರು, ಯಶಸ್ವಿಯಾಗದವರು, ನತದೃಷ್ಟರು ಎಂದೂ ಕರೆಯಲಾಗುತ್ತದೆ.

ಈ ದೃಷ್ಟಿಯಿಂದ ನೋಡಿದಾಗ ಈ ಆರ್ಥಿಕ ಸಾಮ್ರಾಜ್ಯ ಕಟ್ಟಿದವರು ಸಮಾಜದಲ್ಲಿ ಬಹುದೊಡ್ಡ ಯಶಸ್ಸನ್ನು, ಜೀವನದ ಹೆಚ್ಚು ಕಾಲವನ್ನು ಸುಖ ಸಂತೋಷದ ದಿನಗಳನ್ನು ಅನುಭವಿಸಿದವರು.

ಒಮ್ಮೆ ಅವರು ನಮ್ಮ ಸಮಾಜದ ಅತ್ಯಂತ ಕೆಳಗಿನ ಜನರನ್ನು ನೋಡಿದರೆ ಸಾಕು ಅವರು ಹಿಮಾಲಯದಷ್ಟು ಎತ್ತರದಲ್ಲಿ ಇರುವುದು ತಿಳಿದುಕೊಂಡು ಮನಸ್ಸಿಗೆ ಖಂಡಿತ ಸಮಾಧಾನ ಮಾಡಿಕೊಳ್ಳಬಹುದು. ತಮಗೆ ಈ ಕ್ಷಣದಲ್ಲಿ ಬಂದಿರುವುದು ಒಂದು ಸಣ್ಣ ಪ್ರಮಾಣದ ಕಷ್ಟ. ಮುಂದೆ ಇನ್ನೇನೋ ದೊಡ್ಡ ಸ್ಥಾನ ಗಳಿಸಲು




ಇದರಿಂದ ತೊಂದರೆಯಾಗಬಹುದೇ ಹೊರತು ಬದುಕಿನ ಸಾಮಾನ್ಯ ಸೌಕರ್ಯಗಳಲ್ಲಿ ಅವರು ಎಷ್ಟೋ ಜನರಿಗಿಂತ ಈಗಾಗಲೇ ಮುಂದಿದ್ದಾರೆ ಎಂದು ಅರ್ಥಮಾಡಿಕೊಂಡರೆ ಅವರ ಕಷ್ಟಗಳು ಯಾವ ಲೆಕ್ಕಕ್ಕೂ ಇಲ್ಲ ಎಂದೇ ಅನಿಸುತ್ತದೆ.

ಅವರ ಸಹಾಯಕ್ಕೆ ಬಹಳಷ್ಟು ಹಾದಿಗಳು ಇರುತ್ತದೆ. ಆದರೆ ಅನೇಕ ಬಡವರಿಗೆ ಎಲ್ಲಾ ರೀತಿಯ ಮಾರ್ಗಗಳು ಮುಚ್ಚಿ ಬಿಡುತ್ತದೆ.

ಬದುಕಿನ ಒಂದು ಸೂಕ್ಷ್ಮತೆಯನ್ನು ನಾವು ಅರ್ಥಮಾಡಿಕೊಂಡರೆ ಜೀವನ ಸ್ವಲ್ಪ ಸರಳ, ಸುಲಭ ಮತ್ತು ನೆಮ್ಮದಿಯಾಗಬಹುದು.

**ಮೊದಲಿಗೆ,**

ನಾವು ಇಲ್ಲಿಯವರೆಗೆ ಬದುಕಿರುವುದೇ ಒಂದು ಸಾಧನೆ ಮತ್ತು ನೆಮ್ಮದಿಗೆ ಕಾರಣವಾಗಬೇಕು. ಎಷ್ಟೋ ಜನ ಇದರಿಂದಲೇ ವಂಚಿತರಾಗಿರುವುದನ್ನು ನೆನಪಿಸಿಕೊಳ್ಳಿ.

**ಎರಡನೆಯದಾಗಿ,**

ನಮ್ಮ ಊಟ ಬಟ್ಟೆ ವಸತಿಗಳು ನಮ್ಮ ಅವಶ್ಯಕತೆ ತಕ್ಕಂತೆ ಇದ್ದರೆ ಅದು ಮತ್ತೊಂದು ಸಾಧನೆ – ತೃಪ್ತಿಯ ಕಾರಣ ಎಂದೇ ಭಾವಿಸಿ.

**ಮೂರನೆಯದಾಗಿ,**

ನಮ್ಮ ರಕ್ತ ಸಂಬಂಧಗಳು, ಸಂಸಾರ, ಬಂಧು ಬಳಗಗಳು ಸ್ನೇಹಿತರು ಹೆಚ್ಚು ಘರ್ಷಣೆಗಳಿಲ್ಲದೆ ( ಸಣ್ಣ ಪುಟ್ಟ ವಿರಸಗಳನ್ನು ಹೊರತುಪಡಿಸಿ ) ಒಂದು ತಕ್ಕಮಟ್ಟಿನ ಸೌಹಾರ್ದ ಸಂಬಂಧ ಉಳಿದಿದ್ದರೆ ಅದು ಮಗದೊಂದು ಸಾಧನೆ ಮತ್ತು ಅದೃಷ್ಟ ಎಂದೇ ಪರಿಗಣಿಸಿ.

**ನಾಲ್ಕನೆಯದಾಗಿ,**

ಇರುವ ಅವಕಾಶದಲ್ಲಿ ನಮ್ಮ ಪ್ರತಿಭೆ, ಸಾಮರ್ಥ್ಯ ಪ್ರದರ್ಶಿಸಲು ವೇದಿಕೆ ದೊರೆತು ಅದರಿಂದ ಹಣ, ಅಧಿಕಾರ, ಜನಪ್ರಿಯತೆ ದೊರೆತರೆ ಅದು ಬದುಕಿನ ಬಹುದೊಡ್ಡ ಸಾಧನೆ ಸಾರ್ಥಕತೆ ಮತ್ತು ಬೋನಸ್ ಎಂದು ಪರಿಗಣಿಸಿ.

**ಐದನೆಯದಾಗಿ,**

ನೀವು ನಿರೀಕ್ಷಿಸದ ಅನೇಕ ಉತ್ತಮ ಗುಣಮಟ್ಟದ ಎಲ್ಲವೂ ದೊರೆತರೆ ( ಇದು ತೀರಾ ಅಪರೂಪ ) ನಿಮ್ಮನ್ನು ನೀವು ಅತ್ಯಂತ ಸುಖಿ ಎಂದೇ ಭಾವಿಸಿ.

**ಆರನೆಯದಾಗಿ,**

ಒಂದು ವೇಳೆ ನೀವು ಎಲ್ಲಾ ಯಶಸ್ಸುಗಳನ್ನು ಗಳಿಸಿ ಯಾವುದೋ ಕಾರಣದಿಂದ ಎಲ್ಲವನ್ನೂ ಕಳೆದುಕೊಳ್ಳಬೇಕಾಗಿ ಬಂದಾಗ ಅಥವಾ ಕಳೆದುಕೊಂಡರೆ ಆಗಲೂ ಸದ್ಯದ ಪರಿಸ್ಥಿತಿಯನ್ನು ನೆನೆದು ಧೃತಿಗೆಡಬೇಡಿ. ಮತ್ತೆ ಬದುಕಿರುವುದೇ ಒಂದು ಸಾಧನೆ ಎಂಬ ತೀರ್ಮಾನಕ್ಕೆ ಬನ್ನಿ. ಹೊರ ಪ್ರಪಂಚದ ಅನೇಕರ ಕುಹುಕದ ಮಾತುಗಳಿಗೆ ಹೆಚ್ಚಿನ ಮಾನ್ಯತೆ ನೀಡದೆ ಸೃಷ್ಟಿಯ ಜೀವಿ ಎಂದು ಭಾವಿಸಿ ಅಂತರ್ಮುಖಿಯಾಗಿ ನಿಮ್ಮನ್ನು ನೀವು ಸಂತೈಸಿಕೊಳ್ಳಿ.

ಯಶಸ್ಸಿನ ಇಮೇಜ್ ಒಂದು ಭ್ರಮೆ ಎಂಬುದನ್ನು ಜೀವನಪರ್ಯಂತ ಮರೆಯದಿರಿ. ಮೇಲೆ ಏರಿದವರು ಮತ್ತೆ ಕೆಳಗೆ ಇಳಿಯುವ ಸಾಧ್ಯತೆಯನ್ನು ಮೊದಲೇ ನಿರೀಕ್ಷಿಸಿ. ಅದು ಬದುಕಿನ ಭಾಗವೇ ಆಗಿರುತ್ತದೆ ಎಂದು ತಿಳಿದುಕೊಳ್ಳಿ.

ನೀವು ಈಗಾಗಲೇ ಯಶಸ್ಸಿನ ಹಾದಿಯಲ್ಲಿದ್ದು ಬದುಕಿನ ಬಗ್ಗೆ ಒಂದು ನಿರ್ದಿಷ್ಟ ಮತ್ತು ಸ್ಪಷ್ಟ ಅಭಿಪ್ರಾಯ ಹೊಂದಿದ್ದರೆ ಈ ನನ್ನ ಅಭಿಪ್ರಾಯ ನಿರ್ಲಕ್ಷಿಸಿ.

ತುಂಬಾ ಅತೃಪ್ತಿ, ಅಸಮಾಧಾನ, ಅಸಹನೆ, ಕಷ್ಟ, ಬಡತನ ಇರುವವರಾದರೆ ದಯವಿಟ್ಟು ಸ್ವಲ್ಪ ಯೋಚಿಸಿ.

ಬೆತ್ತಲೆಯೊಂದಿಗೆ ಭೂ ಪ್ರವೇಶಿಸುವ ನಾವು ಮತ್ತೆ

**ಬೆತ್ತಲಾಗಲು ಹೆದರುವುದೇಕೆ......,**

ಬೆಳೆಯುತ್ತಾ ದೇಹ ಬಲಿಯುತ್ತದೆ. ಅಂಗಾಗಗಳು ದಪ್ಪವಾಗುತ್ತವೆ. ಉಡುಗೆ ತೊಡುಗೆಗಳು ಮೈ ಅಲಂಕರಿಸುತ್ತವೆ. ಮನಸ್ಸಿನಲ್ಲಿ ಹಲವಾರು ಭಾವನೆಗಳು ಮೂಡುತ್ತವೆ. ಬೇರೆ ಬೇರೆ ಸಂಬಂಧಗಳು ಜೊತೆಯಾಗುತ್ತವೆ.

ಆದರೆ ಅವೆಲ್ಲವೂ ತಾತ್ಕಾಲಿಕವಲ್ಲವೇ.

ಜೀವನದ ಎಲ್ಲಾ ದಿನಗಳು ಹಿತಕರವಾಗಿಯೇ ಇರಬೇಕು ಎಂದರೆ ಹೇಗೆ ? ಒಂದಷ್ಟು ಕಹಿ ದಿನಗಳು ಸಹ ಸಹಿಸಬೇಕಲ್ಲವೇ ?

ಗಣ್ಯ ವ್ಯಕ್ತಿ ಆದ ಕಾರಣಕ್ಕೆ ಕಷ್ಟಗಳು, ನೋವುಗಳು, ದುಃಖಗಳು, ಅವಮಾನಗಳು ಸಹ ಗಣ್ಯವಾಗುವುದಿಲ್ಲ. ಅದು ಪ್ರತಿ ಮನುಷ್ಯನಿಗೂ ಸಹಜ ಮತ್ತು ಸಾಮಾನ್ಯ. ಆದರೆ ನಮ್ಮ ಭ್ರಮೆ ಮತ್ತು ಕೃತಕ ಮನಸ್ಥಿತಿಯ ಪರಿಸರ ಹಾಗು ಜನಪ್ರಿಯತೆ ನಮ್ಮ ಮಾನ ಅವಮಾನಗಳು ದೊಡ್ಡದು ಎಂಬಂತೆ ನಮ್ಮೊಳಗೆ ಬಿಂಬಿತವಾಗಿ ನಮ್ಮನ್ನು ಚಿಕ್ಕವರನ್ನಾಗಿಸುತ್ತದೆ.

" ಎಲ್ಲವನ್ನೂ, ಎಲ್ಲರನ್ನೂ ಕಳೆದುಕೊಂಡ ಮೇಲೆಯೇ ನಮ್ಮನ್ನು ನಾವು ಪಡೆಯುವುದು "

ಅದಕ್ಕಿಂತ ದೊಡ್ಡ ಸ್ವಾತಂತ್ರ್ಯ ಸೃಷ್ಟಿಯ ಜೀವಿಗೆ ಇನ್ನೇನಿದೆ.

**ಇದು ಒಣ ವೇದಾಂತವಲ್ಲ ವಾಸ್ತವ.ಇರಬಹುದು,**

ನಿಮಗೆ ಆರ್ಥಿಕ ಸಂಕಷ್ಟ, ತೆರಿಗೆ ಕಿರುಕುಳ,
ಸಾಲಗಾರರ ಒತ್ತಡ,ಸ್ವಾಭಿಮಾನಕ್ಕೆ ಧಕ್ಕೆ,
ಸೋಲಿನ ಹತಾಶೆ,ವಿಫಲತೆಯ ನಿರಾಶೆ,
ಅದು ಬದುಕಲು ಕಾರಣಗಳಾಗಬೇಕೇ ಹೊರತು ಸಾಯಲು ಅಲ್ಲ.ಸಾವು ಬಂದೇ ಬರುತ್ತದೆ. ಅದನ್ನು ಹುಡುಕಲು ಪ್ರಯತ್ನಿಸಬಾರದು.

ನಾವು ನಮ್ಮನ್ನು ಮಾತ್ರ ನಿಯಂತ್ರಿಸಿಕೊಳ್ಳಬಹುದು. ಇತರರು ನಮ್ಮ ನಿಯಂತ್ರಣಕ್ಕೆ ಸಿಗುವುದು ಮತ್ತು ನಮ್ಮ ಇಚ್ಛೆಗೆ ಅನುಗುಣವಾಗಿ ವರ್ತಿಸುತ್ತಾರೆ ಎಂದು ನಿರೀಕ್ಷಿಸುವುದು ಬಹುದೊಡ್ಡ ತಪ್ಪಾಗಬಹುದು.

ಎಷ್ಟೇ ಸಾಲ ಆಗಲಿ,ಎಷ್ಟೇ ಅವಮಾನ ಆಗಲಿ,
ಯಾವೊನೇ ಕೈಕೊಡಲಿ,ಯಾವೊಳೇ ಕೈಬಿಡಲಿ,
ಎಷ್ಟೇ ಸೋಲಾಗಲಿಯಾರು ಏನೇ ಅಂದುಕೊಳ್ಳಲಿ,
ಹೊಟ್ಟೆ ತುಂಬ ಊಟ ಮಾಡಿ, ಕಣ್ಣು ತುಂಬ ನಿದ್ದೆ ಮಾಡಿ, ಒಂದು ಕಾಫಿ ಕುಡಿದು,ಸಿನಿಮಾಗೆ ಹೋಗಿ ಬಿಡಿ.
ಆತ್ಮಹತ್ಯೆ, ಗೀತ್ಮಹತ್ಯೆ ಎಲ್ಲಾ ಹೇಡಿಗಳ ಸರಕು.
ಸಾವು ಅಂದರೆ ತುಂಬಾ ಹೆದರಿಕೆ. ಅದಕ್ಕೆ ಅದನ್ನು ಹುಡುಕಿಕೊಂಡು ಹೋಗಬೇಡಿ ಬದುಕು ಮುಖ್ಯ.

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಮನಸ್ಸುಗಳ ಅಂತರಂಗದ ಚಳವಳಿ,

# ಬೊಮ್ಮಲದೇವಿಪುರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ತಟ್ಟೆ ಲೋಟ,ಓದುವ ಸಾಮಗ್ರಿಗಳು, ವಾಟರ್ ಫಿಲ್ಟರ್ ಕೊಡುಗೆ

ಕೊರಟಗೆರೆ ತಾಲೂಕಿನ ಬೊಮ್ಮಲದೇವಿಪುರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ತ್ರಿಗೋಷ್ ಚಾರಿಟಬಲ್ ಟ್ರಸ್ಟ್ ನ ಪ್ರದಾನ ಕಾರ್ಯದರ್ಶಿ ಸುನೀತಾ ಗಿರಿ ಗೌಡರಸಹಕಾರ 55 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗುಣಮಟ್ಟದ ತಟ್ಟೆ ಲೋಟ , ಓದುವ ಇನ್ನಿತರ ಸಾಮಗ್ರಿಗಳು ಹಾಗೂ ಖಾಸಗಿ ಕನ್ನಡ ಚಾನಲ್ ವತಿಯಿಂದ ಶುದ್ಧ ಕುಡಿಯುವ ನೀರು ಒದಗಿಸುವ ಸಲುವಾಗಿ ಕಮರ್ಷಿಯಲ್ ವಾಟರ್ ಫಿಲ್ಟರ್ ಅನ್ನು ಕೊಡುಗೆಯಾಗಿ ನೀಡಲಾಯಿತು.ಕಳೆದೊಂದು ವರ್ಷಗಳಿಂದ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿರುವ ತ್ರಿಗೋಷ್ ಚಾರಿಟಬಲ್ ಟ್ರಸ್ಟ್ ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಪಣತೊಟ್ಟಿದ್ದು , ಸರ್ಕಾರಿ ಶಾಲೆಗಳ ಮಕ್ಕಳ ಭವಿಷ್ಯದ ಹಿತ ದೃಷ್ಟಿಯಿಂದ ಎಲ್ಲಾ ರೀತಿಯಿಂದಲೂ ಸಹಕಾರ ಮಾಡಿಕೊಂಡು ಬಂದಿದ್ದು ಅನೇಕ ಕಡೆಗಳಲ್ಲಿ ಟೀ ಶರ್ಟ್, ಪೀಠೋಪಕರಣ , ಒದಗಿಸಿ ಸಾರ್ವಜನಿಕ ವಲಯದಲ್ಲಿ ಭರಪೂರ ಮೆಚ್ಚುಗೆ ಗಳಿಸಿದೆ. ಈ ಸಂದರ್ಭದಲ್ಲಿ ಟ್ರಸ್ಟ್ ನ ಎಲ್ಲಾ ಸದಸ್ಯರುಗಳು ,ಊರಿನ ಗ್ರಾಮಸ್ಥರು , ಶಾಲೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು








# ರಾಮದೇವರ ಬೆಟ್ಟದ ಕಲ್ಲು ಗಣಿಗಾರಿಕೆಗೆ ಕಡಿವಾಣ ಹಾಕುವವರಿಲ್ಲವೆ..? ಪರಿಸರ ನಾಶದ ಕೃತ್ಯ ತಡೆಗೆ ವಕೀಲ ರಮೇಶ್ ನಾಯಕ್ ಒತ್ತಾಯ

ತುಮಕೂರು: ತುಮಕೂರು ನಗರ ಸಮೀಪದ ರಾಮದೇವರಬೆಟ್ಟದ ತಪ್ಪಲಿನಲ್ಲಿ ಅವ್ಯಾಹತವಾಗಿ ಕ್ರಶರ್, ಕ್ವಾರಿ ನಡೆಯುತ್ತಿದ್ದು, ಇದರಿಂದ ರಾಮದೇವರಬೆಟ್ಟದ ತಪ್ಪಲಿನ ಜೀವವೈಧ್ಯತೆ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಕೃಷಿ, ಜಲಚರ, ಪರಿಸರ ಹಾನಿಯಾಗುತ್ತಿದೆ. ಸಂಬಂಧಿಸಿದ ಇಲಾಖೆಗಳಿಗೆ ಹಾನಿಯ ಅರಿವಿದ್ದರೂ ಕಣ್ಣುಮುಚ್ಚಿಕೊಂಡು ಅನುಮತಿ ನೀಡಿರುವುದೇ ಇದಕ್ಕೆ ಕಾರಣ ಎಂದು ಹೈ ಕೋರ್ಟ್ ನ್ಯಾಯವಾದಿ, ಬಾಲ ನ್ಯಾಯ ಮಂಡಳಿ ಸದಸ್ಯ ರಮೇಶ್ ನಾಯಕ್ ಎಲ್. ಹೇಳಿದ್ದಾರೆ.

ಪ್ರಕೃತಿ, ಪರಿಸರದ ಮೇಲಿನ ಹಾನಿ ತಡೆಗೆ ಕ್ರಮ ತೆಗೆದುಕೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರೂ ಯಾರೊಬ್ಬರೂ ಧನಾತ್ಮಕವಾಗಿ ಸ್ಪಂದಿಸಿಲ್ಲ, ಈ ಬಗ್ಗೆ ತಾವು ಹೈ ಕೋರ್ಟ್‌ಗೆ ಸಾರ್ವಜನಿಕ ಅರ್ಜಿ ಸಲ್ಲಿಸಿ ಕಾನೂನು ಹೋರಾಟ ನಡೆಸುವುದಾಗಿ ತಿಳಿಸಿದ್ದಾರೆ.

ತುಮಕೂರು ನಗರ ಹಾಗೂ ಸಿದ್ಧಗಂಗಾ ಮಠಕ್ಕೆ ಅತಿ ಸಮೀಪವಿರುವ ರಾಮದೇವರಬೆಟ್ಟದಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯಿಂದ ಧೂಳು ಆವರಿಸಿ ಜನಜೀವನದ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಶ್ರದ್ಧಾ ಕೇಂದ್ರವಾಗಿದ್ದ ರಾಮದೇವರಬೆಟ್ಟವು ಕಲ್ಲುಗಣಿಗಾರಿಕೆಯಿಂದ ಇಬ್ಬಾಗವಾಗಿದೆ. ಐತಿಹಾಸಿಕ ದೇವರಾಯನದುರ್ಗ ಮಿಸಲು ಅರಣ್ಯಪ್ರದೇಶದ ಸುತ್ತಮುತ್ತಲಿನ ಮೈದಾಳ, ಪಂಡಿತನಹಳ್ಳಿ, ಮಾರನಾಯಕನಪಾಳ್ಯ, ಅರೆಗುಜ್ಜನಹಳ್ಳಿ,



ದುರ್ಗದಹಳ್ಳಿ, ಸೇಟುಪಾಳ್ಯ ಪ್ರದೇಶಗಳಲ್ಲಿ ಕಲ್ಲುಗಣಿಗಾರಿಗೆ ವ್ಯಾಪಕವಾಗಿ ನಡೆಯುತ್ತಿದೆ. ಮುಖ್ಯವಾಗಿ ಮೈದಾಳ ಗ್ರಾಮಕ್ಕೆ ಹೊಂದಿಕೊಂಡಿರುವ ರಾಮದೇವರಬೆಟ್ಟದ ತಪ್ಪಲಿನಲ್ಲಿ ಸುಮಾರು 20 ಎಕರೆ ಪ್ರದೇಶ ವಿಸ್ತೀರ್ಣದಲ್ಲಿ ಬೆಟ್ಟವನ್ನೇ ಕಡಿದುಹಾಕಲಾಗಿದೆ ಎಂದು ರಮೇಶ್ ನಾಯಕ್ ಹೇಳಿದ್ದಾರೆ.

ಮುಂದಿನ ದಿನಗಳಲ್ಲಿ ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಗೆ ಒಳಪಡಲಿರುವ ಮೈದಾಳ, ಸುತ್ತಮುತ್ತಲ ಗ್ರಾಮಗಳಲ್ಲಿ ನಿರಂತರವಾಗಿ ನಡೆಯುತ್ತಿರುವ ಕಲ್ಲುಗಣಿಗಾರಿಕೆ ನಗರದ ಜನರ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರಲಿದೆ. ಇಷ್ಟೆಲ್ಲದರ ಅರಿವಿದ್ದರೂ ಸಂಬಂಧಿಸಿದ ಅಧಿಕಾರಿಗಳು ಗಣಿಗಾರಿಕೆಗೆ ಅನುಮತಿ ನೀಡಿರುವುದು ಹಲವು ಅನುಮಾನಕ್ಕೆ ಕಾರಣವಾಗಿದೆ. ತಾವು ನೀಡಿದ ದೂರಿನ ಹಿನ್ನೆಲೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಪರಿಸರ ಮಾಲಿನ್ಯ ನಿಯಂತ್ರಣಾ ಮಂಡಳಿ ಅಧಿಕಾರಿಗಳು ಜನವರಿ 17ರಂದು ಮೈದಾಳಕ್ಕೆ ಕಲ್ಲುಗಣಿಗಾರಿಕೆ ಸ್ಥಳ ಮಹಜರಿಗೆ ತೆರಳಿದ್ದಾಗ ಕ್ರಷರ್–ಕ್ವಾರಿ ದಣಿಗಳ ಬೆಂಬಲಿಗರು ಅಡ್ಡಗಟ್ಟಿ ತಡೆದಿದ್ದಾರೆ ಎಂದು ಗೊತ್ತಾಗಿದೆ. ಈ ವೇಳೆ ಅಧಿಕಾರಿಗಳು ರಸ್ತೆಯಲ್ಲೇ ಸ್ಥಳ ಮಹಜರು ಶಾಸ್ತ್ರ ಮುಗಿಸಿದ್ದಾರೆ. ನಂತರ ಈ ಬಗ್ಗೆ ಅಧಿಕಾರಿಗಳು ಪೊಲೀಸರಿಗೂ ದೂರು ನೀಡಿಲ್ಲ, ಪೊಲೀಸ್ ರಕ್ಷಣೆಯಲ್ಲಿ ಸ್ಥಳ ಪರಿಶೀಲನೆ, ಕರ್ತವ್ಯಕ್ಕೆ ಅಡ್ಡಿ ವಿರುದ್ಧ ಕ್ರಮಕ್ಕೂ ಪ್ರಯತ್ನವನ್ನೂ ಮಾಡಿಲ್ಲ ಎಂದು ಹೇಳಿದ್ದಾರೆ.

ಕಲ್ಲುಗಣಿಗಾರಿಕೆಯಿಂದ ಪರಿಸರ ಹಾಗೂ ಜೀವಸಂಕುಲದ ಮೇಲೆ ತೀವ್ರ ಹಾನಿಯಾಗುತ್ತದೆ. ಇದು ಅರಣ್ಯ ನಾಶ, ಜೀವವೈವಿಧ್ಯದ ನಾಶ ಮತ್ತು ವಾಯುಮಾಲಿನ್ಯಕ್ಕೆ ಕಾರಣವಾಗುತ್ತದೆ. ಗಣಿಗಳಿಂದ ಬಿಡುಗಡೆಯಾಗುವ ವಿಷಕಾರಿ ರಾಸಾಯನಿಕಗಳು, ಆರ್ಸೆನಿಕ್ ಮುಂತಾದವು ಸಮೀಪದ ಕೆರೆಗಳನ್ನು ಕಲುಶಿತಗೊಳಿಸುತ್ತವೆ ಹಾಗೂ ಅಂತರ್ಜಲ ಮಟ್ಟ ಕುಸಿತಕ್ಕೂ ಕಾರಣವಾಗುತ್ತದೆ. ಸ್ಫೋಟಕ ಶಬ್ಧ, ಧೂಳು ಉಸಿರಾಟದ ಸಮಸ್ಯೆಗಳನ್ನು ಉಂಟುಮಾಡುತ್ತದೆ. ನೈಸರ್ಗಿಕ ಆವಾಸಸ್ಥಾನಗಳ ನಾಶದಿಂದ ವನ್ಯಜೀವಿಗಳು ಹಾಗೂ ಸಸ್ಯವರ್ಗ ನಾಶವಾಗುತ್ತವೆ. ಮಣ್ಣಿನ ಸವೆತ ಮತ್ತು ಭೂಕಂಪನದಂತಹ ಗಂಭೀರ ಪರಿಣಾಮಗಳನ್ನು ಪರಿಸರ ಮತ್ತು ಸ್ಥಳೀಯ ಜನ ಎದುರಿಸಬೇಕಾಗುತ್ತದೆ.



ಕಾನೂನು ಹೋರಾಟದಲ್ಲಿ ನಂಬಿಕೆ

ದೇವರಾಯನದುರ್ಗ ಸುತ್ತಮುತ್ತಲ ಪ್ರದೇಶ ಈಗಾಗಲೇ ಮಣ್ಣು ಮಾಫಿಯಾದಿಂದ ತತ್ತರಿಸಿದೆ. ಪ್ರಕರಣ ಹೈ ಕೋರ್ಟ್ ಅಂಗಳಕ್ಕೆ ಹೋಗಿದ್ದರಿಂದ ನ್ಯಾಯಾಲಯದ ಆದೇಶದಿಂದ ಮಣ್ಣು ಮಾಫಿಯಾ ನಿಂತಿದೆ. ಈ ಭಾಗದಲ್ಲಿ ಕ್ರಷರ್–ಕ್ವಾರಿ ಅಬ್ಬರ ಹೆಚ್ಚಾಗಿ ಪರಿಸರ ನಾಶವಾಗುತ್ತಿದೆ. ನಿಯಂತ್ರಣಕ್ಕೆ ಅಧಿಕಾರಿಗಳು ಕ್ರಮ ತೆಗೆದುಕೊಳ್ಳುವ ಬಗ್ಗೆ ಅನುಮಾನಗಳಿವೆ. ಹೀಗಾಗಿ ಹೈ ಕೋರ್ಟ್‌ಗೆ ಅರ್ಜಿ ಸಲ್ಲಿಸಿ ಕಾನೂನು ಹೋರಾಟ ಮಾಡುವುದು ಅನಿವಾರ್ಯವಾಗಿದೆ ರಮೇಶ್ ನಾಯಕ್ ಎಲ್. ತಿಳಿಸಿದ್ದಾರೆ.

